ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು
JSS MAHAVIDYAPEETHA, MYSURU

# ಜೆಎಸ್‌ಎಸ್ ವಾರ್ತಾಪತ್ರ

## ಮಾಸಪತ್ರಿಕೆ

# JSS VARTHAPATHRA

*Monthly Magazine*

ಸಂಪುಟ 10 ಸಂಚಿಕೆ 12 ಡಿಸೆಂಬರ್ 2025




ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ 16ನೇ ಘಟಿಕೋತ್ಸವದಲ್ಲಿ ಉಪರಾಷ್ಟ್ರಪತಿಗಳಾದ ಸನ್ಮಾನ್ಯ ಶ್ರೀ ಸಿ.ಪಿ. ರಾಧಾಕೃಷ್ಣನ್‌ರವರು ಪ್ರತಿಭಾನ್ವಿತ ಪದವೀಧರರಿಗೆ ಚಿನ್ನದ ಪದಕಗಳನ್ನು ವಿತರಿಸಿದರು. ಡಾ. ಸಿ.ಜಿ. ಬೆಟಸೂರಮಠ, ಗೌ.ನ್ಯಾ. ಶ್ರೀ ಶಿವರಾಜ್ ಪಾಟೀಲ್, ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್, ಡಾ. ಬಿ ಸುರೇಶ್ ಹಾಗೂ ಡಾ. ಹೆಚ್. ಬಸವನಗೌಡಪ್ಪರವರುಗಳಿದ್ದಾರೆ. (9 ನವೆಂಬರ್ 2025)



ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್ಎಸ್ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣ 30ನೇ ಸಂಗೀತ ಸಮ್ಮೇಳನವನ್ನು ಪರಮಪೂಜ್ಯ ಜಗದ್ಗುರುಗಳವರ ದಿವ್ಯಸಾನ್ನಿಧ್ಯದಲ್ಲಿ ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪರವರು ಉದ್ಘಾಟಿಸಿದರು. ಚಿತ್ರದಲ್ಲಿ ಡಾ. ಸಿ.ಜಿ. ಬೆಟಸೂರಮಠ, ಶ್ರೀ ಮೈಸೂರು ಎಂ. ನಾಗರಾಜ್, ಡಾ. ಮೈಸೂರು ಎಂ. ಮಂಜುನಾಥ್, ಶ್ರೀ ವಿ. ರಘುನಂದನ್, ಡಾ. ಟಿ.ಎಸ್. ಸತ್ಯವತಿ, ಶಾಸಕರಾದ ಶ್ರೀ ಟಿ.ಎಸ್. ಶ್ರೀವತ್ಸ ಮತ್ತು ಪ್ರೊ. ಎಸ್. ರಾಮಪ್ರಸಾದ್‌ರವರುಗಳಿದ್ದಾರೆ. (2 ಡಿಸೆಂಬರ್ 2025)



ಸುತ್ತೂರು ಶ್ರೀಕ್ಷೇತ್ರದಲ್ಲಿ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣ ಮೂರು ದಿನಗಳ ಜೆಎಸ್ಎಸ್ ಅಂತರ–ಸಂಸ್ಥೆಗಳ ಕ್ರೀಡಾಕೂಟವನ್ನು ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ಡಾ. ಎಂ.ಎ. ಸಲೀಂರವರು ಉದ್ಘಾಟಿಸಿದರು. ಡಾ. ಎಂ.ಬಿ. ಬೋರಲಿಂಗಯ್ಯ, ಶ್ರೀ ಎನ್. ವಿಷ್ಣುವರ್ಧನ, ಶ್ರೀ ವಿ.ಆರ್. ಸನೋಜ್ ಮೊದಲಾದವರಿದ್ದಾರೆ. (25 ನವೆಂಬರ್ 2025)

## ಪ್ರಯತ್ನ ಮತ್ತು ಪರಿಶ್ರಮದಿಂದ ಹಿಂದೆ ಸರಿಯಬಾರದು

ಪ್ರಯತ್ನ ಮತ್ತು ಪರಿಶ್ರಮದಿಂದ ಎಂದಿಗೂ ಹಿಂದೆ ಸರಿಯಬಾರದು ಎಂದು ಉಪರಾಷ್ಟ್ರಪತಿಗಳಾದ ಸನ್ಮಾನ್ಯ ಶ್ರೀ ಸಿ.ಪಿ. ರಾಧಾಕೃಷ್ಣನ್‌ರವರು ಹೇಳಿದರು.

ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯಲ್ಲಿ ದಿನಾಂಕ 9.11.2025 ರಂದು ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ 16ನೇ ಘಟಿಕೋತ್ಸವದಲ್ಲಿ ಭಾಷಣ ಮಾಡುತ್ತಾ ತಿಳಿಸಿದರು. ಇತರರೊಂದಿಗೆ ನಿಮ್ಮನ್ನು ಹೋಲಿಸಿಕೊಳ್ಳಬಾರದು. ದೇವರು ಪ್ರತಿಯೊಬ್ಬರನ್ನೂ ವಿಭಿನ್ನ ಪ್ರತಿಭೆಯಿಂದ ಸೃಷ್ಟಿಸಿರುತ್ತಾನೆ. ಕೆಲವೊಮ್ಮೆ ವಿಫಲತೆಗಳು ಎದುರಾಗಬಹುದು. ಸ್ವಾಮಿ ವಿವೇಕಾನಂದರು ಹೇಳಿದಂತೆ ಉದ್ದೇಶವನ್ನು ಸಾಧಿಸುವವರೆಗೂ ನಿಲ್ಲಬಾರದು. ಎಂದಿಗೂ ಶ್ರಮವನ್ನು ನಿಲ್ಲಿಸಬಾರದು. ಕೆಲವೊಮ್ಮೆ ದೇಹಕ್ಕೆ ವಿಶ್ರಾಂತಿ ಬೇಕಾಗಬಹುದು ಅದು ಸಹಜ. ಆದರೆ, ವಿಶ್ರಾಂತಿಯ ನಂತರ ಹೆಚ್ಚು ಉತ್ಸಾಹದಿಂದ ಕಾರ್ಯವನ್ನು ಪುನರಾರಂಭಿಸಬೇಕು. ನಾನು ಐದು ಚುನಾವಣೆಗಳಲ್ಲಿ ಸ್ಪರ್ಧಿಸಿದ್ದೆ. ಅದರಲ್ಲಿ ಎರಡು ಬಾರಿ ಗೆದ್ದಿದ್ದೇನೆ. ಮೂರು ಬಾರಿ ಸೋತಿದ್ದೇನೆ. ಏಕೆ ಸೋತಿದ್ದೇನೆ ಎಂಬುದು ನನಗೂ ತಿಳಿಯಲಿಲ್ಲ. ಆದರೆ, ಎಲ್ಲರೂ ಗೆಲ್ಲುವುದಾಗಿ ನಂಬಿದ್ದರು. ಅದೇ ನಿರಂತರ ಶ್ರಮದಿಂದ ಇಂದು ನಾನು ರಾಷ್ಟ್ರದ ಉಪರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಲು ಅವಕಾಶ ದೊರೆತಿದೆ. ಶಿಕ್ಷಣ ಮುಗಿದ ನಂತರ ಜೀವನ ಮುಗಿದಂತಾಗುವುದಿಲ್ಲ. ಅದು ನಿಮ್ಮ ಹೊಸ ಪ್ರಯಾಣದ ಪ್ರಾರಂಭವಷ್ಟೇ. ನಿಮ್ಮ ಗುರಿ, ಕನಸು ಮತ್ತು ಭವಿಷ್ಯವನ್ನು ನಿಜಗೊಳಿಸಲು ನೀವು ಪ್ರಯತ್ನಿಸಬೇಕು. ಯಶಸ್ವಿಯಾಗುವುದು ಎಲ್ಲರಿಗೂ ಸಾಧ್ಯ. ಪ್ರತಿಭೆ ದೇವರ ಕೊಡುಗೆ ಆಗಬಹುದು. ಆದರೆ, ಸ್ಥಿರತೆ ನಿಮ್ಮ ಕೈಯಲ್ಲಿದೆ. ನೀವು ಗುರಿಯತ್ತ ನಿಮ್ಮ ವೇಗದಲ್ಲಿ ನಿರಂತರವಾಗಿ ಸಾಗಬೇಕು ಎಂದು ತಿಳಿಸಿದರು.

ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್‌ರವರು ಇಂದು ಭಾರತವು ನಾವೀನ್ಯತೆ ಮತ್ತು ಸಂಶೋಧನೆಯ ಹೊಸ ಯುಗವನ್ನು ಪ್ರವೇಶಿಸುತ್ತಿದೆ. ಆರೋಗ್ಯ, ರಕ್ಷಣೆ, ಜೈವಿಕ ತಂತ್ರಜ್ಞಾನ, ಔಷಧ, ಕೃತಕ ಬುದ್ಧಿಮತ್ತೆ ಮತ್ತು ಸುಸ್ಥಿರ ಅಭಿವೃದ್ಧಿ ಕ್ಷೇತ್ರಗಳಲ್ಲಿ ಅಪಾರ ಅವಕಾಶಗಳಿವೆ. ಯುವ ಪ್ರತಿಭೆಗಳು ಉದ್ಯಮಶೀಲತೆಯ ಮೂಲಕ ಸಮಾಜಕ್ಕೆ ಹೊಸ ದಿಕ್ಕನ್ನು ನೀಡುವುದು ಅತ್ಯಗತ್ಯ. ಉದ್ಯೋಗಾಕಾಂಕ್ಷಿಗಳ ಬದಲು ಉದ್ಯೋಗ ಒದಗಿಸುವವರಾಗಿರಲು ಶ್ರಮಿಸಬೇಕು. ಜೀವನದಲ್ಲಿ ಯಾವಾಗಲೂ ನಿರಂತರ ಕಲಿಕೆ ಮತ್ತು ನಿರಂತರ ಸೇವೆಯ ಮನೋಭಾವವನ್ನು ಕಾಪಾಡಿಕೊಳ್ಳಬೇಕು. ಮೈಸೂರು ಮತ್ತು ಬೆಂಗಳೂರನ್ನು ರಾಷ್ಟ್ರದ ಶೈಕ್ಷಣಿಕ ಕೇಂದ್ರವನ್ನಾಗಿ ಮಾಡಲು ಜೆಎಸ್‌ಎಸ್ ಸಂಸ್ಥೆ ಮಹತ್ವದ ಕೊಡುಗೆ ನೀಡುತ್ತಿದೆ. ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳು ಧರ್ಮ, ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಸಂರಕ್ಷಣೆಯ ಜೊತೆಗೆ ಚಿಂತನಶೀಲ ಮತ್ತು ಸೂಕ್ಷ್ಮಗ್ರಾಹಿಯಾಗಿದ್ದರು. ಸಮಾಜದಲ್ಲಿನ ಅಸಮಾನತೆ, ಬಡತನ ಮತ್ತು ಅನಕ್ಷರತೆಯನ್ನು ನಿರ್ಮೂಲನೆ ಮಾಡಲು ಅವರು ಅನೇಕ ಸಕಾರಾತ್ಮಕ ಕ್ರಮಗಳನ್ನು ಕೈಗೊಂಡರು ಎಂದು ತಿಳಿಸಿದರು.

ಘಟಿಕೋತ್ಸವದಲ್ಲಿ ಒಟ್ಟು 2925 ವಿದ್ಯಾರ್ಥಿಗಳಿಗೆ ಪದವಿಗಳನ್ನು ಪ್ರದಾನ ಮಾಡಲಾಯಿತು. ಸುಪ್ರಿಂಕೋರ್ಟ್ ನಿವೃತ್ತ ನ್ಯಾಯಮೂರ್ತಿಗಳಾದ ಡಾ. ಶಿವರಾಜ ಪಾಟೀಲ್, ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠ, ಸಮಕುಲಾಧಿಪತಿಗಳಾದ ಡಾ. ಬಿ. ಸುರೇಶ್, ಕುಲಪತಿಗಳಾದ ಡಾ. ಎಚ್. ಬಸವನಗೌಡಪ್ಪನವರು ಉಪಸ್ಥಿತರಿದ್ದರು.

## ಕ್ರೀಡೆಗಳಿಂದ ಚಾರಿತ್ರ್ಯ ನಿರ್ಮಾಣ ಸಾಧ್ಯ

ಕ್ರೀಡೆಗಳಿಂದ ಚಾರಿತ್ರ್ಯ ನಿರ್ಮಾಣ ಸಾಧ್ಯ ಎಂದು ಮಹಾನಿರ್ದೇಶಕರು, ಆರಕ್ಷಕ ಮಹಾನಿರೀಕ್ಷಕರು ಮತ್ತು ಪೊಲೀಸ್ ಪಡೆ ಮುಖ್ಯಸ್ಥರಾದ ಡಾ. ಎಂ.ಎ. ಸಲೀಂರವರು ಹೇಳಿದರು.

ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣೆಯ ಅಂಗವಾಗಿ ಸುತ್ತೂರಿನಲ್ಲಿ ದಿನಾಂಕ 25.11.2025 ರಂದು ನಡೆದ ಜೆಎಸ್ಎಸ್ ಅಂತರ–ಸಂಸ್ಥೆಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡುತ್ತಾ ತಿಳಿಸಿದರು. ಕ್ರೀಡೆಗಳು ದೃಢವ್ಯಕ್ತಿತ್ವ ನಿರ್ಮಾಣಕ್ಕೆ ಸಹಕಾರಿಯಾಗಿದ್ದು, ಸೋಲು ಗೆಲುವುಗಳನ್ನು ಸಮನಾಗಿ ಸ್ವೀಕರಿಸುವ ಮನೋಭಾವವನ್ನು ಬೆಳೆಸುತ್ತವೆ. ಶ್ರೇಷ್ಠ ಕ್ರೀಡಾ ಸಾಧಕರು ಸಣ್ಣ ಸಣ್ಣ ಗೆಲುವುಗಳ ಮೂಲಕವೇ ಮಹತ್ತರವಾದ ಸಾಧನೆಗಳನ್ನು ಮಾಡಿದ್ದಾರೆ. ಬದುಕಿನಲ್ಲಿ ಶ್ರದ್ಧೆ, ಪರಿಶ್ರಮದಿಂದ ಪ್ರಯತ್ನಪಟ್ಟರೆ ಫಲ ದೊರೆಯುತ್ತದೆ. ಜೆಎಸ್ಎಸ್ ಸಂಸ್ಥೆಗಳಲ್ಲಿ ಏರ್ಪಡಿಸುವ ಕಾರ್ಯಕ್ರಮಗಳಲ್ಲಿರುವ ಶಿಸ್ತು ಮತ್ತು ವ್ಯವಸ್ಥಿತ ಸಂಘಟನೆ ರಾಷ್ಟ್ರಕ್ಕೆ ಮಾದರಿಯಾಗಿವೆ. ಶಿಕ್ಷಣ ವ್ಯಾಪಾರೀಕರಣವಾಗುತ್ತಿರುವ ಇಂದಿನ ದಿನಗಳಲ್ಲಿ ಶ್ರೀಮಠವು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿರುವುದು ಶ್ರೇಷ್ಠ ಸಾಧನೆಯೇ ಸರಿ ಎಂದು ತಿಳಿಸಿದರು.

ಪರಮಪೂಜ್ಯ ಜಗದ್ಗುರುಗಳವರು ಆಶೀರ್ವಚನ ನೀಡುತ್ತಾ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕವಾಗಿ ಆಧುನಿಕ ವಿದ್ಯಮಾನಕ್ಕೆ ತಕ್ಕಂತೆ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಹಲವಾರು ಸಂಸ್ಥೆಗಳನ್ನು ನಿರ್ಮಿಸಿದರು. ಶಿಕ್ಷಣವನ್ನು ನೀಡಲು ಅವರು ಮಾಡಿದ ಸಂಕಲ್ಪ ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯವ್ಯಾಪ್ತಿ ವಿಸ್ತಾರವಾಗಲು ಕಾರಣವಾಗಿದೆ. ವಿದ್ಯಾರ್ಥಿಗಳಿಗಾಗಿ ಅವರ ಸಂಸ್ಮರಣಾರ್ಥ ಕ್ರೀಡಾಕೂಟವನ್ನು ಆಯೋಜಿಸಿದೆ. ಗ್ರಾಮೀಣ ಆಟಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ದೇಸಿ ಆಟಗಳನ್ನು ಸಹ ಏರ್ಪಡಿಸಲಾಗುತ್ತಿದೆ. ದ್ವೇಷ, ಅಸೂಯೆಗಳಿಲ್ಲದ ಕ್ಷೇತ್ರವೆಂದರೆ ಕ್ರೀಡೆ. ಇಲ್ಲಿ ಗೆದ್ದವರನ್ನು ಪ್ರೋತ್ಸಾಹಿಸುತ್ತಾ, ಸೋತವರನ್ನು ಸಂತೈಸುತ್ತಾ ಮುನ್ನಡೆಸಲಾಗುತ್ತದೆ. ಕ್ರೀಡೆಯು ಮನುಜನ ಅವಿಭಾಜ್ಯ ಸಂಗಾತಿಯಾಗಿದ್ದು, ಶ್ರದ್ಧೆಯಿಂದ ತೊಡಗಿಕೊಂಡರೆ ಸಾಧನೆ ಸಾಧ್ಯ ಎಂದು ತಿಳಿಸಿದರು.

ಕ್ರೀಡಾಪಟುಗಳ ಪರವಾಗಿ ಸುತ್ತೂರು ಜೆಎಸ್ಎಸ್ ಪ್ರೌಢಶಾಲೆಯ ರಾಜ್ಯಮಟ್ಟದ ಕ್ರೀಡಾಪಟು ಕು. ಯೋಗಿಣಿ ಹಾಗೂ ಕ್ರೀಡಾಧಿಕಾರಿಗಳ ಪರವಾಗಿ ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀ ಕೆ.ಎಸ್. ಮಲ್ಲರಾಜೇ ಅರಸ್ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಮೈಸೂರು ದಕ್ಷಿಣ ವಲಯದ ಆರಕ್ಷಕ ಉಪ ಮಹಾನಿರೀಕ್ಷಕರಾದ ಡಾ. ಎಂ.ಬಿ. ಬೋರಲಿಂಗಯ್ಯ ರವರು ಅಧ್ಯಕ್ಷತೆಯನ್ನು ವಹಿಸಿದ್ದರು. ವಾಟಾಳು ಶ್ರೀ ಸೂರ್ಯಸಿಂಹಾಸನ ಮಠದ ಡಾ. ಶ್ರೀ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಶ್ರೀ ಎನ್. ವಿಷ್ಣುವರ್ಧನ್‌ರವರು, ಅಂತಾರಾಷ್ಟ್ರೀಯ ವಾಲಿಬಾಲ್ ಕ್ರೀಡಾಪಟುಗಳಾದ ಶ್ರೀ ವಿ.ಆರ್. ಸನೋಜ್‌ರವರು ಉಪಸ್ಥಿತರಿದ್ದರು. ವಿವಿಧ ಜೆಎಸ್ಎಸ್ ಸಂಸ್ಥೆಗಳಿಂದ ಆಗಮಿಸಿದ್ದ ಕ್ರೀಡಾ ತಂಡಗಳು ಅತಿಥಿಗಳಿಗೆ ಗೌರವ ವಂದನೆ ಸಲ್ಲಿಸಿ, ಪಥಸಂಚಲನ ನಡೆಸಿದರು. ಮೂರು ದಿನಗಳ ಕ್ರೀಡಾಕೂಟದಲ್ಲಿ 130 ಸಂಸ್ಥೆಗಳ 3588 ವಿದ್ಯಾರ್ಥಿಗಳು ವಿವಿಧ ಆಟೋಟ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಸುತ್ತೂರಿನ ಜೆಎಸ್ಎಸ್ ವಸತಿ ಶಾಲಾ ಮಕ್ಕಳು ಮಲ್ಲಕಂಬ ಪ್ರದರ್ಶನ ನೀಡಿದರು. ಸುತ್ತೂರು ಶಾಲಾ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶ್ರೀ ಎಂ.ಎನ್. ಶಿವಕುಮಾರ್ ಸ್ವಾಗತಿಸಿದರು. ಶ್ರೀ ಎಲ್.ಎಂ. ನಂದೀಶ್ ವಂದಿಸಿದರು. ಶ್ರೀ ಡಿ.ಎಂ. ಸಿದ್ಧಲಿಂಗಸ್ವಾಮಿ ಕಾರ್ಯಕ್ರಮ ನಿರೂಪಿಸಿದರು.

## ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣಾರ್ಥ ಜೆಎಸ್‌ಎಸ್ ಅಂತರ ಸಂಸ್ಥೆಗಳ ಕ್ರೀಡಾಕೂಟ

ಸುತ್ತೂರು ಶ್ರೀಕ್ಷೇತ್ರದಲ್ಲಿ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣೆಯ ಅಂಗವಾಗಿ ದಿನಾಂಕ 25.11.2025 ರಿಂದ 27.11.2025ವರೆಗೆ ನಡೆದ 3 ದಿನಗಳ ಜೆಎಸ್‌ಎಸ್ ಅಂತರ–ಸಂಸ್ಥೆಗಳ ಕ್ರೀಡಾಕೂಟದಲ್ಲಿ ವಿವಿಧ ಶಾಲಾ ಕಾಲೇಜುಗಳು ಮೇಲಾಟಗಳಲ್ಲಿ (ಅಥ್ಲೆಟಿಕ್ಸ್) ವೈಯಕ್ತಿಕ ಮತ್ತು ತಂಡ ಪ್ರಶಸ್ತಿಗಳನ್ನು ಪಡೆದಿರುತ್ತಾರೆ.

**'ಅಥ್ಲೆಟಿಕ್ಸ್' ವಿಭಾಗ**

**ಪ್ರಾಥಮಿಕ ಶಾಲಾ ವಿಭಾಗ–ವೈಯಕ್ತಿಕ ಪ್ರಶಸ್ತಿ :** ಬಾಲಕರ ಮತ್ತು ಬಾಲಕಿಯರ ವಿಭಾಗದಲ್ಲಿ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಾದ ಕು. ಕುಮೆಂತಮ್ ಧನಜಿತ್ ಮೈತೈ 13 ಅಂಕಗಳು ಮತ್ತು ಕು. ಹಬಾನಾ ಹೆಚ್ ಲಿಂಗ್ಡೋ 13 ಅಂಕಗಳನ್ನು ಪಡೆದು ವೈಯಕ್ತಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ತಂಡ ಪ್ರಶಸ್ತಿ :** ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆ ಬಾಲಕರ ವಿಭಾಗದಲ್ಲಿ 52 ಅಂಕಗಳು ಮತ್ತು ಬಾಲಕಿಯರ ವಿಭಾಗದಲ್ಲಿ 52 ಅಂಕಗಳನ್ನು ಪಡೆದು ತಂಡ ಪ್ರಶಸ್ತಿಗಳನ್ನು ಪಡೆದುಕೊಂಡಿದೆ.

**ಪ್ರೌಢಶಾಲಾ ವಿಭಾಗ–ವೈಯಕ್ತಿಕ ಪ್ರಶಸ್ತಿ :** ಬಾಲಕರ ವಿಭಾಗದಲ್ಲಿ ಮೈಸೂರಿನ ಜೆ.ಪಿ. ನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿಯಾದ ಸಮರ್ಥ್ 15 ಅಂಕಗಳು ಮತ್ತು ಬಾಲಕಿಯರ ವಿಭಾಗದಲ್ಲಿ ಸರ್ಕಾರಿ ಉನ್ನತೀಕರಿಸಿದ ಸುತ್ತೂರಿನ ಹಿರಿಯ ಪ್ರಾಥಮಿಕ ಶಾಲೆಯ ಕು. ಶುಭಶ್ರೀ 13 ಅಂಕಗಳನ್ನು ಪಡೆದು ವೈಯಕ್ತಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ತಂಡ ಪ್ರಶಸ್ತಿ :** ಬಾಗೆಯ ಜೆಎಸ್‌ಎಸ್ ಪಬ್ಲಿಕ್ ಶಾಲೆ ಬಾಲಕರ ವಿಭಾಗದಲ್ಲಿ 36 ಅಂಕಗಳು ಮತ್ತು ಸುತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆ ಬಾಲಕಿಯರ ವಿಭಾಗದಲ್ಲಿ 35 ಅಂಕಗಳನ್ನು ಪಡೆದು ತಂಡ ಪ್ರಶಸ್ತಿಯನ್ನು ಪಡೆದುಕೊಂಡಿದೆ.

**ಪದವಿಪೂರ್ವ ಕಾಲೇಜು ವಿಭಾಗ –ವೈಯಕ್ತಿಕ ಪ್ರಶಸ್ತಿ:** ಬಾಲಕರ ವಿಭಾಗದಲ್ಲಿ ಮೈಸೂರಿನ ಊಟಿ ರಸ್ತೆಯ ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನ ಕು. ಸಿ. ಕೈಲಾಸ್ 10 ಅಂಕಗಳು ಮತ್ತು ಬಾಲಕಿಯರ ವಿಭಾಗದಲ್ಲಿ ಚಾಮರಾಜನಗರದ ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜಿನ ಕು. ಅಕ್ಷತಾ 10 ಅಂಕಗಳನ್ನು ಪಡೆದು ವೈಯಕ್ತಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ತಂಡ ಪ್ರಶಸ್ತಿ :** ಬಾಲಕರ ವಿಭಾಗದಲ್ಲಿ ಮೈಸೂರಿನ ಊಟಿ ರಸ್ತೆಯ ಜೆಎಸ್‌ಎಸ್ ಪದವಿಪೂರ್ವ ಕಾಲೇಜು 16 ಅಂಕಗಳು, ಮತ್ತು ಬಾಲಕಿಯರ ವಿಭಾಗದಲ್ಲಿ ಚಾಮರಾಜನಗರದ ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು 36 ಅಂಕಗಳನ್ನು ಪಡೆದು ತಂಡ ಪ್ರಶಸ್ತಿಯನ್ನು ಪಡೆದುಕೊಂಡಿದೆ.

**ಪದವಿ ಕಾಲೇಜು ವಿಭಾಗ–ವೈಯಕ್ತಿಕ ಪ್ರಶಸ್ತಿ :** ಪುರುಷರ ಮತ್ತು ಮಹಿಳೆಯರ ವಿಭಾಗದಲ್ಲಿ ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದ ವಿದ್ಯಾರ್ಥಿ ಕು. ಧೃವ ಬಲ್ಲಾಳ್ 10 ಅಂಕಗಳು ಮತ್ತು ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ಕು. ಲಕ್ಷ್ಮಾ 10 ಅಂಕಗಳನ್ನು ಪಡೆದು ವೈಯುಕ್ತಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ತಂಡ ಪ್ರಶಸ್ತಿ :** ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯವು ಪುರುಷರ ವಿಭಾಗದಲ್ಲಿ 44 ಅಂಕಗಳು ಮತ್ತು ಮಹಿಳೆಯರ ವಿಭಾಗದಲ್ಲಿ ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ

ಕಾಲೇಜು 26 ಅಂಕಗಳನ್ನು ಪಡೆದು ತಂಡ ಪ್ರಶಸ್ತಿಯನ್ನು ಪಡೆದುಕೊಂಡಿದೆ.

**'ಪಥಚಲನೆ ಮತ್ತು ಪ್ರಮುಖ ಆಟಗಳ' ವಿಭಾಗ**

**ಪಥಚಲನ:** ಪ್ರಾಥಮಿಕ ಶಾಲಾ ವಿಭಾಗದಲ್ಲಿ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆ ಪ್ರೌಢಶಾಲಾ ವಿಭಾಗದಲ್ಲಿ ಜೆಎಸ್‌ಎಸ್ ಪ್ರೌಢಶಾಲೆ, ಪದವಿಪೂರ್ವ ಕಾಲೇಜು ವಿಭಾಗದಲ್ಲಿ ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು ಹಾಗೂ ಪದವಿ ಕಾಲೇಜು ವಿಭಾಗದಲ್ಲಿ ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯ ಪ್ರಥಮ ಸ್ಥಾನ ಪಡೆದಿವೆ.

**ಪ್ರಾಥಮಿಕ ಶಾಲಾ ವಿಭಾಗಗಳ ಕಬಡ್ಡಿಯಲ್ಲಿ** ಬಾಲಕರ ವಿಭಾಗದಲ್ಲಿ ಚಾಮರಾಜನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆ ಮತ್ತು ಬಾಲಕಿಯರ ವಿಭಾಗದಲ್ಲಿ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯು ಪ್ರಥಮ ಸ್ಥಾನ ಪಡೆದರೆ ಕು. ವೈ. ಮೋಹಿತ್ ಉತ್ತಮ ಆಟಗಾರ ಪ್ರಶಸ್ತಿ ಮತ್ತು ಕು. ಹಬಾನ ಹೆಚ್ ಲಿಂಗ್ಡೋ ಉತ್ತಮ ಆಟಗಾರ್ತಿ ಪ್ರಶಸ್ತಿ ಪಡೆದಿದ್ದಾರೆ.

**ಪ್ರೌಢಶಾಲಾ ವಿಭಾಗಗಳ ಖೋ-ಖೋದಲ್ಲಿ** ಬಾಲಕ ಮತ್ತು ಬಾಲಕಿಯರ ವಿಭಾಗದಲ್ಲಿ ಸುತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆಯು ಪ್ರಥಮ ಸ್ಥಾನ ಪಡೆದು, ಕು. ಹೆಚ್.ಎನ್. ಲಿಖಿತ್ ಉತ್ತಮ ಆಟಗಾರ ಪ್ರಶಸ್ತಿ ಕು. ಎಸ್.ಆರ್. ರಂಜಿತ ಉತ್ತಮ ಆಟಗಾರ್ತಿ ಪ್ರಶಸ್ತಿ ಪಡೆದಿದ್ದಾರೆ.

**ಪ್ರೌಢಶಾಲಾ ವಿಭಾಗಗಳ ವಾಲಿಬಾಲ್‌ನಲ್ಲಿ** ಚಾಮರಾಜನಗರದ ಜೆಎಸ್‌ಎಸ್ ಬಾಲಕರ ಪ್ರೌಢಶಾಲೆ ಪ್ರಥಮ ಸ್ಥಾನ ಪಡೆದರೆ, ಈ ಶಾಲೆಯ ಕು. ಶಿವಕುಮಾರ್ ಉತ್ತಮ ಆಟಗಾರ ಪ್ರಶಸ್ತಿ ಪಡೆದಿದ್ದಾರೆ. ಥ್ರೋಬಾಲ್‌ನಲ್ಲಿ ಸುತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆ ಪ್ರಥಮ ಸ್ಥಾನ ಪಡೆದರೆ, ಇದೇ ಶಾಲೆಯ ಕು. ಕೃತಿಕ ಉತ್ತಮ ಆಟಗಾರ್ತಿ ಪ್ರಶಸ್ತಿ ಪಡೆದಿದ್ದಾರೆ.

**ಪದವಿಪೂರ್ವ ಕಾಲೇಜು ವಿಭಾಗಗಳ ಪುರುಷರ ವಾಲಿಬಾಲ್‌ನಲ್ಲಿ** ಹುಲ್ಲಹಳ್ಳಿಯ ಜೆಎಸ್‌ಎಸ್ ಪದವಿಪೂರ್ವ ಕಾಲೇಜು ಪ್ರಥಮ ಸ್ಥಾನ, ಮೈಸೂರಿನ ಜೆಎಸ್‌ಎಸ್ ಪಾಲಿಟೆಕ್ನಿಕ್ ಕಾಲೇಜಿನ ಕು. ಮಹದೇವ ಉತ್ತಮ ಆಟಗಾರ ಪ್ರಶಸ್ತಿ, ಮತ್ತು ಬಾಲ್‌ಬ್ಯಾಡ್ಮಿಂಟನ್‌ನಲ್ಲಿ ನಂಜನಗೂಡಿನ ಜೆಎಸ್‌ಎಸ್ ಪದವಿಪೂರ್ವ ಕಾಲೇಜು ಪ್ರಥಮ ಸ್ಥಾನ ಪಡೆದಿದೆ. ಕು. ಕೆ.ಎಲ್. ರವಿಚಂದ್ರ. ಉತ್ತಮ ಆಟಗಾರ ಪ್ರಶಸ್ತಿ ಪಡೆದಿದ್ದಾರೆ. ಮಹಿಳೆಯರ ಥ್ರೋಬಾಲ್‌ನಲ್ಲಿ ಸರಗೂರಿನ ಜೆಎಸ್‌ಎಸ್ ಪದವಿಪೂರ್ವ ಕಾಲೇಜು ಪ್ರಥಮ ಸ್ಥಾನ, ಸರಸ್ವತಿಪುರಂನ ಜೆಎಸ್‌ಎಸ್ ಕಾಲೇಜಿನ ಕು. ಸುಪ್ರೀತ ಉತ್ತಮ ಆಟಗಾರ್ತಿ ಮತ್ತು ಬಾಲ್‌ಬ್ಯಾಡ್ಮಿಂಟನ್‌ನಲ್ಲಿ ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು ಪ್ರಥಮ ಸ್ಥಾನ ಪಡೆದರೆ, ಕು. ಜಿ.ಎಸ್. ಪ್ರತೀಕ್ಷ ಉತ್ತಮ ಆಟಗಾರ್ತಿ ಪ್ರಶಸ್ತಿ ಪಡೆದಿದ್ದಾರೆ.

**ಪದವಿ ಕಾಲೇಜು ವಿಭಾಗಗಳ ಪುರುಷರ ವಾಲಿಬಾಲ್ ಮತ್ತು ಬಾಲ್‌ಬ್ಯಾಡ್ಮಿಂಟನ್‌ನಲ್ಲಿ** ಮೈಸೂರಿನ ಊಟಿ ರಸ್ತೆಯ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಪ್ರಥಮ ಸ್ಥಾನ ಪಡೆದರೆ, ವಾಲಿಬಾಲ್‌ನಲ್ಲಿ ಕು. ಎಂ.ಪಿ. ಶ್ರೀನಿವಾಸ್, ಬಾಲ್‌ಬ್ಯಾಡ್ಮಿಂಟನ್‌ನಲ್ಲಿ ಕು. ಎಸ್. ಚಂದನ್ ಉತ್ತಮ ಆಟಗಾರ ಪ್ರಶಸ್ತಿ ಪಡೆದಿದ್ದಾರೆ. ಮಹಿಳೆಯರ ಥ್ರೋಬಾಲ್‌ನಲ್ಲಿ ಮೈಸೂರಿನ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯ ಪ್ರಥಮ ಸ್ಥಾನ ಪಡೆದರೆ, ಕು. ಹೆಚ್.ಎಂ. ದೀಪ. ಉತ್ತಮ ಆಟಗಾರ್ತಿ ಪ್ರಶಸ್ತಿ ಪಡೆದಿದ್ದಾರೆ. ಬಾಲ್‌ಬ್ಯಾಡ್ಮಿಂಟನ್‌ನಲ್ಲಿ ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜು ಪ್ರಥಮ ಸ್ಥಾನ ಪಡೆದರೆ ಕು. ಟಿ.ಎಸ್. ಸಿಂಚನ ಉತ್ತಮ ಆಟಗಾರ್ತಿ ಪ್ರಶಸ್ತಿ ಪಡೆದಿದ್ದಾರೆ.

**ಕ್ರೀಡಾಕೂಟದ ದಾಖಲೆಗಳು :** ಈ ವರ್ಷದ ಕ್ರೀಡಾಕೂಟದಲ್ಲಿ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆ ಬಾಲಕರ ವಿಭಾಗದಲ್ಲಿ ಕು. ನಾಂಗ್ ವಾಂಗ್ ಓಡಾಂಗ್

ಮತ್ತು ಕು. ಕುಮೆಂತಮ್ ಧನಜಿತ್ ಮೈತ್ರೈ ಕ್ರಮವಾಗಿ ಚಕ್ರ ಎಸೆತ ಮತ್ತು ಉದ್ದ ಜಿಗಿತ ಮತ್ತು ಬಾಲಕಿಯರ ವಿಭಾಗದಲ್ಲಿ ಹಬಾನಾ ಹೆಚ್ ಲಿಂಗ್ಡೋ ಗುಂಡು ಎಸೆತ ಮತ್ತು ಚಕ್ರ ಎಸೆತ ಸ್ಪರ್ಧೆಗಳಲ್ಲಿ, ಪ್ರೌಢಶಾಲಾ ಬಾಲಕಿಯರ ವಿಭಾಗದಲ್ಲಿ ಸುತ್ತೂರಿನ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಯಾದ ಶುಭಶ್ರೀ 1500 ಮೀ. ಓಟದ ಸ್ಪರ್ಧೆಯಲ್ಲಿ, ಸುತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆಯ ವಿದ್ಯಾರ್ಥಿಗಳು 4x100 ಮೀ. ರಿಲೇ ಸ್ಪರ್ಧೆಯಲ್ಲಿ, ಮತ್ತು ಮೈಸೂರಿನ ಜೆ.ಪಿ. ನಗರದ ಪಬ್ಲಿಕ್ ಶಾಲೆಯ ವಿದ್ಯಾರ್ಥಿಯಾದ ಕು. ಬಿ. ಖುಷಿ ಚಕ್ರ ಎಸೆತ ಸ್ಪರ್ಧೆಯಲ್ಲಿ, ರಾಮಾಪುರ ಜೆಎಸ್‌ಎಸ್ ಪ್ರೌಢಶಾಲೆಯ ವಿದ್ಯಾರ್ಥಿಯಾದ ಕು. ಗಂಗೋತ್ರಿ ಎತ್ತರ ಜಿಗಿತ ಸ್ಪರ್ಧೆಯಲ್ಲಿ ದಾಖಲೆ ಮಾಡಿದ್ದಾರೆ.

ಪದವಿಪೂರ್ವ ಕಾಲೇಜು ಬಾಲಕರ ವಿಭಾಗದಲ್ಲಿ ಮೈಸೂರಿನ ಊಟಿ ರಸ್ತೆಯ ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳಾದ ಕು. ಎಂ.ಎಸ್. ನಿಶಾಂತ್ 100 ಮೀ. ಓಟದಲ್ಲಿ, ಕು. ಸಿ. ಕೈಲಾಸ್ 400 ಮೀ. ಓಟದಲ್ಲಿ, ಮತ್ತು 4 ಮಂದಿ ವಿದ್ಯಾರ್ಥಿಗಳು 4x100 ಮೀ. ರಿಲೇ ಸ್ಪರ್ಧೆಯಲ್ಲಿ, ಪದವಿ ಕಾಲೇಜು ವಿಭಾಗದಲ್ಲಿ ಮೈಸೂರಿನ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಾದ ಕು. ಧ್ರುವ ಬಲ್ಲಾಳ್ 100 ಮತ್ತು 400 ಮೀ. ಓಟದಲ್ಲಿ, ಕು. ಲಕ್ಷ್ಯಾ ಉದ್ದ ಜಿಗಿತ ಸ್ಪರ್ಧೆಯಲ್ಲಿ, ಮೈಸೂರಿನ ಸರಸ್ವತಿಪುರಂನ ಮಹಿಳಾ ಕಾಲೇಜು ವಿದ್ಯಾರ್ಥಿಯಾದ ಕು. ಹೆಚ್.ಎಸ್. ಹರ್ಷಿತಾ 100 ಮತ್ತು 400 ಮೀ. ಓಟದಲ್ಲಿ, 4 ಮಂದಿ ವಿದ್ಯಾರ್ಥಿಗಳು 4x100 ಮೀ. ರಿಲೇ ಸ್ಪರ್ಧೆಗಳಲ್ಲಿ ದಾಖಲೆ ಮಾಡಿದ್ದಾರೆ




ಪ್ರಶಸ್ತಿವಿಜೇತ ಕ್ರೀಡಾಪಟುಗಳೊಂದಿಗೆ ಜೆಎಸ್‌ಎಸ್ ಮಹಾವಿದ್ಯಾಪೀಠದ ಶಿಕ್ಷಣಸಂಸ್ಥೆಗಳ ಅಧಿಕಾರಿಗಳು, ಮುಖ್ಯಸ್ಥರುಗಳು ಹಾಗೂ ಸಿಬ್ಬಂದಿ ವರ್ಗದವರು

## ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ ಕನ್ನಡ ರಾಜ್ಯೋತ್ಸವ

### ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಸುತ್ತೂರು



ಸುತ್ತೂರಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆಶ್ರಯದಲ್ಲಿ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಬಸವೇಶ್ವರ ಬಾಲಕರ ವಿದ್ಯಾರ್ಥಿನಿಲಯದ ನಿಲಯಪಾಲಕರಾದ ಶ್ರೀ ಮಹದೇವಪ್ರಸಾದ್‌ರವರು, ತಾಯಿಯಿಂದ ಕಲಿತ ನಮ್ಮ ಕನ್ನಡ ಭಾಷೆಯು ರೋಮ ರೋಮಗಳಲ್ಲಿಯೂ ಮಿಡಿಯುವ ಭಾಷೆಯಾಗಿದೆ. ಮಗುವಿನ ಮೊದಲ ತೊದಲ ನುಡಿಯೆ ಅಮ್ಮ ಎಂದು ಪ್ರಾರಂಭಗೊಂಡು, ಮಾತೃಭಾಷೆಯಾಗಿ ಮನದಲ್ಲಿ ಮಿಡಿಯುತ್ತದೆ. ಅಮ್ಮನ ಮಾತನ್ನು ಕೇಳಲು ಎಷ್ಟು ಮಧುರವಾಗಿರುತ್ತದೆಯೋ, ಕನ್ನಡವು ಅಷ್ಟೇ ಸಿಹಿಯಾಗಿರುತ್ತದೆ. ಕನ್ನಡ ಭಾಷೆಯನ್ನು ಕಲಿಯುವುದು, ಮಾತನಾಡುವುದು, ಬಳಸುವುದು ನಮ್ಮ ಗೌರವ. ಅಳುವ ಮಗುವಿಗೆ ಜಾನಪದ ಜೋಗುಳ ಹಾಡುವ ಮೂಲಕ ನಲಿಸುವ ಶಕ್ತಿ ಕನ್ನಡ ಭಾಷೆಗಿದೆ. ಕನ್ನಡ ಬರೀ ಭಾಷೆಯಲ್ಲ ಅದೊಂದು ಸಾಹಿತ್ಯದ ವೈಭವ ಶೌರ್ಯದ ಸಂಕೇತ. ಕರ್ನಾಟಕ ಎಂದರೆ ಕೇವಲ ಒಂದು ರಾಜ್ಯವಲ್ಲ, ಇದು ಸಂಸ್ಕೃತಿಯ ನಾಡು, ಸಾಹಿತ್ಯದ ನೆಲೆ, ಶೌರ್ಯದ ತಾಣ ಎಂದು ಹೇಳಿದರು.

ಮುಖ್ಯೋಪಾಧ್ಯಾಯರುಗಳಾದ ಶ್ರೀ ಜಿ. ಶಿವಮಲ್ಲು. ಶ್ರೀ ಎಂ.ಜಿ. ಬಸವಣ್ಣ, ಶ್ರೀ ಜಿ.ಎಂ. ಷಡಕ್ಷರಿ, ಶ್ರೀ ಜಿ. ಶಿವಸ್ವಾಮಿಯವರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಂತರ ಶಾಲಾ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶ್ರೀಮತಿ ಜಿ.ಎಸ್ ಜಗದಾಂಬಿಕ ಸ್ವಾಗತಿಸಿದರು. ಶ್ರೀಮತಿ ಎಸ್. ಹೇಮಲತಾ ವಂದಿಸಿದರು. ಶ್ರೀಮತಿ ಬಿ. ವೇದಾವತಿ ಕಾರ್ಯಕ್ರಮ ನಿರೂಪಿಸಿದರು.

### ಜೆಎಸ್‌ಎಸ್ ಪಬ್ಲಿಕ್ ಶಾಲೆ, ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯ, ಮೈಸೂರು

ಮೈಸೂರಿನ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯದ ಜೆಎಸ್‌ಎಸ್ ಪಬ್ಲಿಕ್ ಶಾಲೆಯಲ್ಲಿ ದಿನಾಂಕ 14.11.2025ರಂದು 70ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕನ್ನಡ ಶಿಕ್ಷಕರಾದ ಶ್ರೀಮತಿ ರೇಣುಕರವರು ಕನ್ನಡ ನಾಡಿನಲ್ಲಿ ಕನ್ನಡದ ಮಹತ್ವ ಎಂಬ ವಿಷಯದ ಬಗ್ಗೆ ಮಾತನಾಡಿ, ಕನ್ನಡ




ಭಾಷೆಗೆ ಒಂದು ಶಕ್ತಿ ಇದೆ, ಸಾಂಸ್ಕೃತಿಕ ಸಿರಿವಂತಿಕೆಯಿದೆ. ನಾಡು ನುಡಿಯ ಉಳಿವಿಗಾಗಿ ಕನ್ನಡಿಗರು ಒಗ್ಗಟ್ಟಾಗಬೇಕೆಂದು ತಿಳಿಸಿದರು. ಪ್ರಾಂಶುಪಾಲರಾದ ಶ್ರೀಮತಿ ಕೆ.ಬಿ. ಸುಮರವರು ತಮ್ಮ ಅಧ್ಯಕ್ಷ ಭಾಷಣದಲ್ಲಿ ಕನ್ನಡ ಕೇವಲ ಭಾಷೆಯಲ್ಲ, ಇದು ಒಂದು ಸಂಸ್ಕೃತಿ, ಜ್ಞಾನಕ್ಕೆ, ಭಾವಕ್ಕೆ ಹತ್ತಿರವಾದ ಭಾಷೆ. ಈ ರಾಜ್ಯೋತ್ಸವ ನಿತ್ಯೋತ್ಸವವಾಗಬೇಕೆಂದು ಕರೆಕೊಟ್ಟರು.

ಏಳು ಮತ್ತು ಎಂಟನೇ ತರಗತಿಯ ವಿದ್ಯಾರ್ಥಿಗಳು ತಂತ್ರಜ್ಞಾನ ಮತ್ತು ವಿದ್ಯುನ್ಮಾನಕ್ಕೆ ಸಂಬಂಧಪಟ್ಟ ದಿನಬಳಕೆಯ ಇಂಗ್ಲಿಷ್ ಭಾಷೆಯ ಕ್ಲಿಷ್ಟ ಪದಗಳಿಗೆ ಕನ್ನಡದಲ್ಲಿ ಯಥಾವತ್ತಾಗಿ ಬಳಸಬಹುದಾದ ಕೆಲವೊಂದು ಪದಗಳಿಗೆ ಕನ್ನಡದಲ್ಲಿ ಅರ್ಥೈಸುತ್ತಾ ಕವಿತೆಗಳನ್ನು ಹಾಡಿ, ಒಗಟುಗಳನ್ನು ಹೇಳಿ – ಕೇಳಿ ರಂಜಿಸಿದರು. 5 ರಿಂದ 9ನೆಯ ತರಗತಿಯ ಮಕ್ಕಳು ಅರಿಶಿನ ಮತ್ತು ಕೆಂಪು ಬಣ್ಣಗಳ ಉಡುಗೆ ತೊಟ್ಟು ಕನ್ನಡದ ಬಾವುಟಗಳನ್ನು ಹಿಡಿದು ಕರ್ನಾಟಕದ ಇತಿಹಾಸ ಪರಂಪರೆಯನ್ನು ಕುರಿತಾದ ಸುಮಧುರ ಹಾಡುಗಳಿಗೆ ನರ್ತಿಸಿದರು. ಶ್ರೀಮತಿ ಸತ್ಯಭಾಮ ಸ್ವಾಗತಿಸಿದರು. ಶ್ರೀಮತಿ ಸುಮಿತ್ರ ವಂದಿಸಿದರು. ಶ್ರೀ ತೋಂಟದಾರ್ಯ ನಿರೂಪಿಸಿದರು.

□

## ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲ

ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ದಿನಾಂಕ 7.11.2025ರಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಆಯೋಜಿಸಲಾಗಿತ್ತು.

ಸಾಹಿತಿಗಳಾದ ಶ್ರೀ ಮಹಾದೇವ ಶಂಕನಪುರರವರು ಮಾತನಾಡಿ ಕನ್ನಡ ಎಂಬುದು ತಾಯಿ ಭಾಷೆ, ಕರುಳಿನ ಭಾಷೆಯಾಗಿದೆ. ಕನ್ನಡ ಭಾಷೆಯ ಮೇಲೆ ಅಭಿಮಾನ ಇದ್ದರೂ ಕನ್ನಡವನ್ನು ಮರೆಯುತ್ತಿದ್ದೇವೆ. ಜ್ಞಾನವನ್ನು ಬೆಳೆಸಿಕೊಳ್ಳಲು ನಾವು ಬೇರೆ ಭಾಷೆಗಳನ್ನು ಕಲಿಯಬೇಕು, ಆದರೆ ನಮ್ಮ ಕನ್ನಡ ಭಾಷೆಯನ್ನು ಮರೆಯಬಾರದು. ದೇಶಕ್ಕೆ ಬುದ್ಧ, ಬಸವ, ಅಂಬೇಡ್ಕರ್‌ರವರು ನೀಡಿದ ಕೊಡುಗೆ ಅಪಾರ. ಅವರಂತೆ ಸಾಧನೆ ಮಾಡಬೇಕು ಹಾಗೂ ಎಲ್ಲರೂ ನಮ್ಮ ಕನ್ನಡ ಭಾಷೆಯ ಬಗ್ಗೆ ಅಭಿಮಾನವನ್ನು ಬೆಳೆಸಿಕೊಳ್ಳಬೇಕು. ಕನ್ನಡ ನಾಡು ನುಡಿಯ ಉಳಿವಿಗಾಗಿ ಶ್ರಮಿಸಬೇಕು ಎಂದು ತಿಳಿಸಿದರು.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶ್ರೀ ನಾಗರಾಜು ಎಸ್. ಕೊಂಗರಹಳ್ಳಿ, ಕನ್ನಡ ಭಾಷೆ ಅತ್ಯಂತ ಶ್ರೀಮಂತ ಭಾಷೆಯಾಗಿದೆ. ಮಾತೃ ಭಾಷೆಯಲ್ಲಿ ಶಿಕ್ಷಣ ನೀಡಿದರೆ ಮಕ್ಕಳು ಹೆಚ್ಚು ಜ್ಞಾನ ಪಡೆದುಕೊಳ್ಳುತ್ತಾರೆ. ಸ್ಪರ್ಧಾತ್ಮಕ ಜಗತ್ತಿನಲ್ಲಿ ಸಮಯಕ್ಕೆ ಹಾಗೂ ಓದಿಗೆ ಹೆಚ್ಚು

ಪ್ರಾಮುಖ್ಯತೆ ಕೊಡಬೇಕೆಂದು ತಿಳಿಸಿದರು.

ಪ್ರಾಚಾರ್ಯರಾದ ಡಾ. ಹೆಚ್.ಎಸ್. ಕೊಂಗಳಪ್ಪ ನಾಡು ನುಡಿ ಪರಂಪರೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕನ್ನಡ ನಾಡನ್ನು ಶ್ರೀ ಗಂಧದ ನಾಡು, ಕರುನಾಡು, ಕನ್ನಡಾಂಬೆಯ ನಾಡು ಎಂಬೆಲ್ಲ ಹೆಸರುಗಳಿಂದ ಕರೆಯಲಾಗುತ್ತದೆ. ಸುಂದರ ಬೆಟ್ಟ–ಗುಡ್ಡಗಳಿರುವ, ನದಿಗಳು ಹರಿಯುತ್ತಿರುವ ನಾಡು ನಮ್ಮ ಕನ್ನಡ ನಾಡು. ಕನ್ನಡ ಸಾಹಿತ್ಯಕ್ಕೆ ಪಂಪ, ರನ್ನ, ಜನ್ನ ಕುಮಾರವ್ಯಾಸರ ಕೊಡುಗೆ ಅಪಾರ. ಕನ್ನಡಿಗರಾದ ನಾವು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಧ್ಯಾಪಕ, ಅಧ್ಯಾಪಕೇತರ ವೃಂದದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಫೆನ್ಸಿಂಗ್‌ನಲ್ಲಿ ಚಿನ್ನದ ಪದಕ



ಸಂತೇಮರಹಳ್ಳಿಯ ಜೆಎಸ್ಎಸ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾದ ಕು. ಆರ್.ಕೆ. ಮನ್ವಿತ ಹಾಗೂ ಕು. ಆರ್.ಕೆ. ಸಮರ್ಥ್‌ರವರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಒಲಂಪಿಕ್ ಸಂಸ್ಥೆ ಆಯೋಜಿಸಿದ್ದ ರಾಜ್ಯಮಟ್ಟದ ಫೆನ್ಸಿಂಗ್ ಮಿನಿ ಕರ್ನಾಟಕ ಕ್ರೀಡಾಕೂಟದಲ್ಲಿ ಸಾಧನೆಗೈದು ಶಾಲೆಗೆ ಮತ್ತು ಪೋಷಕರಿಗೆ ಕೀರ್ತಿ ತಂದಿದ್ದಾರೆ. ಕು. ಆರ್.ಕೆ. ಮನ್ವಿತ ಬಾಲಕಿಯರ ವಿಭಾಗದಲ್ಲಿ ಪ್ರಥಮ ಬಹುಮಾನ ಗಳಿಸಿ ಚಿನ್ನದ ಪದಕದೊಂದಿಗೆ ಎರಡು ಲಕ್ಷ ನಗದು ಬಹುಮಾನ ಗಳಿಸಿರುತ್ತಾಳೆ. ಕು. ಆರ್.ಕೆ. ಸಮರ್ಥ್ ಬಾಲಕರ ವಿಭಾಗದಲ್ಲಿ ಬೆಳ್ಳಿಯ ಪದಕ ಪಡೆಯುವುದರೊಂದಿಗೆ 70 ಸಾವಿರ ನಗದು ಬಹುಮಾನ ಪಡೆದಿರುತ್ತಾನೆ. ಸಾಧಕರಿಗೆ ಮುಖ್ಯಶಿಕ್ಷಕರು, ಬೋಧಕ – ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

## ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಅಕಾಡೆಮಿ, ಬೆಂಗಳೂರು

ಬೆಂಗಳೂರಿನ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಅಕಾಡೆಮಿಯಲ್ಲಿ ದಿನಾಂಕ 7.11.2025ರಂದು ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಗಣ್ಯರು ದೀಪವನ್ನು ಬೆಳಗಿಸಿ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಹಾಗೂ ರಾಜಗುರುತಿಲಕ ಜಗದ್ಗುರು ಡಾ. ಶ್ರೀ ರಾಜೇಂದ್ರ ಮಹಾಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆಯನ್ನು ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕನ್ನಡ ಚಲನಚಿತ್ರ ನಟ ಹಾಗೂ ನಿರ್ದೇಶಕರಾದ ಶ್ರೀ ನವೀನ್ ಕೃಷ್ಣರವರು ಮಾತನಾಡಿ, ಕನ್ನಡ ನಾಡಿನಲ್ಲಿ ಕನ್ನಡಕ್ಕೆ ಮೊದಲ ಸ್ಥಾನಮಾನ ಸಿಗಬೇಕು. ಆದರೆ ಪ್ರಸ್ತುತ ದಿನಗಳಲ್ಲಿ ಅನ್ಯ ಭಾಷೆಗಳ ಆಕ್ರಮಣ ಹೆಚ್ಚಾಗಿದೆ. ಮಕ್ಕಳು ಹಾಗೂ ಕೆಲವು ಪೋಷಕರು ಇಂಗ್ಲಿಷ್ ಭಾಷೆಯ ಮೋಹಕ್ಕೆ ಒಳಗಾಗುತ್ತಿದ್ದಾರೆ. ಮಕ್ಕಳನ್ನು ಯಾವ ಭಾಷೆಯಲ್ಲಿ ಬೇಕಾದರು ಓದಿಸೋಣ, ಆದರೆ ಕನ್ನಡದ ಮೇಲೆ ಅಭಿಮಾನವನ್ನು ಬೆಳೆಸಬೇಕು ಎಂದು ತಿಳಿಸಿದರು

ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷರು ಹಾಗೂ ಪ್ರಾಧ್ಯಾಪಕರಾದ ಡಾ. ಎಂ.ಎನ್. ನಂದೀಶ್ ಹಂಚೆಯವರು, ಬಹಳ ಹೆಮ್ಮೆಪಡುವ ವಿಚಾರವೆಂದರೆ, ಇಡೀ ದಕ್ಷಿಣ ಭಾರತದ ಯಾವುದೇ ರಾಜ್ಯದಲ್ಲಿಯೂ ಯಾವ ಭಾಷೆಯಲ್ಲಿಯೂ ರಾಜ್ಯೋತ್ಸವವನ್ನು ಆಚರಿಸುವುದಿಲ್ಲ. ಆದರೆ ನಮ್ಮ ಕರ್ನಾಟಕ ರಾಜ್ಯದಲ್ಲಿ ಕನ್ನಡ ರಾಜ್ಯೋತ್ಸವವನ್ನು ಒಂದು ಹಬ್ಬವಾಗಿ ಆಚರಿಸುವುದು ಹೆಮ್ಮೆಯ ವಿಚಾರ. ಆಧುನಿಕ ಶಿಕ್ಷಣ ಏನೇ ಬದಲಾವಣೆ ಆದರೂ ಎಲ್ಲರೂ ತಮ್ಮ ಮಾತೃಭಾಷೆಯಲ್ಲಿ ಶಿಕ್ಷಣ ಕೊಡಿಸುವುದರ ಮೂಲಕ ನಮ್ಮ ಭಾಷೆ ಸಂಸ್ಕೃತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಕನ್ನಡ ಭಾಷೆ ಇತಿಹಾಸವನ್ನು ನೋಡಿದರೆ ಇದು ಕ್ರಿಸ್ತಪೂರ್ವದಲ್ಲಿಯ ಅಶೋಕನ ಶಾಸನಗಳಲ್ಲಿಯೇ ಕೆಲವೊಂದು ಪದಗಳು ಸಿಗುತ್ತದೆ ಎಂದಾದರೆ ಕನ್ನಡ ಅತಿ ಪ್ರಾಚೀನ ಭಾಷೆ ಎಂಬುದನ್ನು ಮರೆಯುವ ಹಾಗಿಲ್ಲ ಎಂದು ತಿಳಿಸಿದರು.

ಪ್ರಾಂಶುಪಾಲರಾದ ಡಾ. ಭೀಮಸೇನ ಸೋರಂಗರಾವ್, ಆಡಳಿತಾಧಿಕಾರಿಗಳಾದ ಶ್ರೀ ಸಿ.ಎಸ್. ವೀರೇಶ್ ಮಾತನಾಡಿದರು. ಕಾಲೇಜಿನ ಸ್ವರಾಗಂ ತಂಡದವರು ಪ್ರಾರ್ಥನೆ ಮತ್ತು ನಾಡಗೀತೆ ಹಾಡಿದರು. ಪ್ರಾಧ್ಯಾಪಕರಾದ ಡಾ. ಡಿ. ಮಹೇಶ್‌ಕುಮಾರ್ ಸ್ವಾಗತಿಸಿದರು. ಎನ್‌ಎಸ್‌ಎಸ್ ಮುಖ್ಯಸ್ಥರಾದ ಡಾ. ಎನ್. ಗಿರೀಶ್ ವಂದಿಸಿದರು. ಸಹಾಯಕ ಪ್ರಾಧ್ಯಾಪಕರಾದ ಶ್ರೀ ಎಂ. ಸತೀಶ್ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ನೃತ್ಯ ರೂಪಕ, ಹಾಡುಗಾರಿಕೆ, ಯಕ್ಷಗಾನ, ವೀರಗಾಸೆ, ಡೊಳ್ಳುಕುಣಿತ, ಹುಲಿವೇಷ ಹಾಗೂ ಬೈಕ್ ರ‍್ಯಾಲಿ ನಡೆಸಲಾಯಿತು.

## ಜೆಎಸ್‌ಎಸ್ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು, ಮೈಸೂರು

ಸ್ವಾತಂತ್ರ್ಯದ ನಂತರ ಭಾರತ ಸರ್ಕಾರವು ಭಾಷಾವಾರು ರಾಜ್ಯಗಳನ್ನು ರಚಿಸಲು ಪ್ರಾರಂಭಿಸಿತು. ವಿವಿಧ ರಾಜಪ್ರಭುತ್ವದ ರಾಜ್ಯಗಳು ಮತ್ತು ನೈರುತ್ಯ ಭಾರತದ ಕನ್ನಡ ಮಾತನಾಡುವ ಪ್ರದೇಶಗಳನ್ನು ಒಗ್ಗೂಡಿಸಿ ಮೈಸೂರು ರಾಜ್ಯವನ್ನು ರಚಿಸಿದ ದಿನವನ್ನು ಕನ್ನಡ ರಾಜ್ಯೋತ್ಸವವೆಂದು ಆಚರಿಸಲಾಗುತ್ತದೆ ಎಂದು ಕನ್ನಡಪ್ರಭ ದಿನಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕರಾದ ಶ್ರೀ ಅಂಶಿ ಪ್ರಸನ್ನ ಕುಮಾರ್‌ರವರು ಹೇಳಿದರು.

**ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ, ಜೆಎಸ್‌ಎಸ್ ನರ್ಸಿಂಗ್ ಶಾಲೆ, ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ, ಜೆಎಸ್‌ಎಸ್ ಫಿಜಿಯೋಥೆರಪಿ ಕಾಲೇಜು ಹಾಗು ಜೆಎಸ್‌ಎಸ್ ನರ್ಸಿಂಗ್ ಕಾಲೇಜು** ಇವರುಗಳ




ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ, ಜೆಎಸ್‌ಎಸ್ ನರ್ಸಿಂಗ್ ಶಾಲೆ, ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ, ಜೆಎಸ್‌ಎಸ್ ಫಿಜಿಯೋಥೆರಪಿ ಕಾಲೇಜು ಹಾಗು ಜೆಎಸ್‌ಎಸ್ ನರ್ಸಿಂಗ್ ಕಾಲೇಜು ಇವರುಗಳ ಸಂಯುಕ್ತಾಶ್ರಯದಲ್ಲಿ ನಡೆದ ಕನ್ನಡ ರಾಜ್ಯೋತ್ಸವದಲ್ಲಿ ಶ್ರೀ ಅಂಶಿ ಪ್ರಸನ್ನ ಕುಮಾರ್‌ರವರು ಮಾತನಾಡುತ್ತಿರುವುದು.

ಸಂಯುಕ್ತಾಶ್ರಯದಲ್ಲಿ ದಿನಾಂಕ 15.11.2025 ರಂದು ಆಯೋಜಿಸಿದ್ದ 70ನೇ ಕನ್ನಡ ರಾಜ್ಯೋತ್ಸವದಲ್ಲಿ ಮಾತನಾಡುತ್ತಾ ಅವರು ತಿಳಿಸಿದರು. 1973ರಲ್ಲಿ ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರುನಾಮಕರಣ ಮಾಡಲಾಯಿತು. ಕುವೆಂಪು, ಮಾಸ್ತಿ ವೆಂಕಟೇಶ್ ಐಯ್ಯಂಗಾರ್ ಹಾಗೂ ಇನ್ನಿತರ ಕವಿಗಳ ಕೊಡುಗೆ ಕನ್ನಡದ ಬೆಳವಣಿಗೆಯಲ್ಲಿ ಅಪಾರವಾದುದು. ಜೆಎಸ್‌ಎಸ್ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ರಾಜ್ಯದ ವಿದ್ಯಾರ್ಥಿಗಳು ಕನ್ನಡ ಭಾಷೆಯನ್ನು ಕಲಿಯಬೇಕು. ಕನ್ನಡ ರಾಜ್ಯೋತ್ಸವದ ದಿನಾಚರಣೆ ನವೆಂಬರ್ 1ಕ್ಕೆ ಸೀಮಿತಗೊಳ್ಳದೆ ನಂಬರ್ ಒನ್ ಕನ್ನಡಿಗರಾಗಬೇಕೆಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕರಾದ ಶ್ರೀ ಆರ್. ಮಹೇಶ್‌ರವರು ಮಾತನಾಡಿ, ಕನ್ನಡ ಬರಿ ಭಾಷೆಯಲ್ಲ, ಬರಿ ನೆಲವಲ್ಲ, ಅದರೊಂದಿಗೆ ನಾವು ಭಾವನಾತ್ಮಕ ಸಂಬಂಧವನ್ನು ಬೆಳೆಸಿಕೊಂಡಿದ್ದೇವೆ. ಭಾರತದ ಇತಿಹಾಸದಲ್ಲಿ ಕನ್ನಡ ಭಾಷೆ ಘನ ಇತಿಹಾಸವನ್ನು ಹೊಂದಿದೆ. ನಮಗೆಲ್ಲರಿಗೂ ತಿಳಿದಿರುವ ಹಾಗೆ ಅನುಭವ ಮಂಟಪವು ಕನ್ನಡ ನಾಡು ಪ್ರಜಾತಂತ್ರ ವ್ಯವಸ್ಥೆಗೆ ಬಹುದೊಡ್ಡ ಕೊಡುಗೆ ನೀಡಿದೆ. ಹಲವು ಭಾಷೆಗಳು ಹಾಕಿಟ್ಟುವುದಕ್ಕೆ ಮುಂಚೆಯೇ ಕನ್ನಡ ಭಾಷೆ ಮುಗಿಲೆತ್ತರಕ್ಕೆ ಇತ್ತು. ಹಾಗಾಗಿ ಈ ನಾಡಿನಲ್ಲಿ ವಾಸಿಸುತ್ತಿರುವ ನಾವು ಪುಣ್ಯವಂತರು. ಎಲ್ಲಾ ಪೋಷಕ ವರ್ಗದವರು ಮನೆಯಲ್ಲಿ ತಮ್ಮ ಮಕ್ಕಳಿಗೆ ಮಾತೃಭಾಷೆಯೊಂದಿಗೆ ಕಲಿಕೆಯನ್ನು ಅಭ್ಯಾಸ ಮಾಡುವುದರಿಂದ ಕನ್ನಡವನ್ನು ಬೆಳೆಸಬಹುದು. ಅನ್ಯ ಭಾಷೆಗಳನ್ನು ಬಳಸಿದರು ಕೂಡ ನಮ್ಮ ಭಾಷೆಯನ್ನು ಬಳಸಿ, ಬೆಳೆಸಿ, ಉಳಿಸಿ ಹಾಗೂ ಪ್ರೀತಿಯಿಂದ ಕಾಣಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಪ್ರಯುಕ್ತ ಅಂತರ ಕಾಲೇಜು ವಿದ್ಯಾರ್ಥಿಗಳಿಂದ ಹಾಡುಗಾರಿಕೆ ಹಾಗೂ ವಿವಿಧ ರಾಜ್ಯಗಳ ವೇಷ ಭೂಷಣಗಳ ಸ್ಥಬ್ಧಚಿತ್ರಗಳನ್ನು ಪ್ರಸ್ತುತಪಡಿಸಲಾಯಿತು. ವಾಕ್ ಮತ್ತು ಶ್ರವಣ ಸಂಸ್ಥೆಯ ಪ್ರಭಾರ ಪ್ರಾಂಶುಪಾಲರಾದ ಡಾ. ಹೇಮಂತ್‌ರವರು,

ಫಿಜಿಯೋಥೆರಪಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಕವಿತರಾಜರವರು, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಅಶ್ವತಿದೇವಿರವರು, ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಡಿ.ಎನ್. ರೇಣುಕಾದೇವಿಯವರು, ಬೋಧಕ ಹಾಗು ಬೋಧಕೇತರ ವರ್ಗದವರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಶ್ರೀಮತಿ ಹೆಚ್.ಎಸ್. ಮಾನಸ ಸ್ವಾಗತಿಸಿದರು. ಶ್ರೀಮತಿ ಎಸ್. ನೀತಾಡಳ್ವಿ ವಂದಿಸಿದರು ಹಾಗು ಶ್ರೀ ಸುನಿಲ್ ಕಾರ್ಯಕ್ರಮ ನಿರೂಪಿಸಿದರು.

□

## ಕಲಬೆರಕೆ ಆಹಾರ ಮಕ್ಕಳ ಬೆಳವಣಿಗೆಗೆ ಅಡ್ಡಿ




ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಪದವಿ ಕಾಲೇಜಿನ ಜೀವರಸಾಯನಶಾಸ್ತ್ರ ವಿಭಾಗದಿಂದ ದಿನಾಂಕ 29.10.2025ರಂದು ಕುಕ್ಕರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಸ್ತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಹಾಯಕ ಪ್ರಾಧ್ಯಾಪಕರುಗಳಾದ ಕು. ಶ್ರೇಯ ನಾಗ ದೇವಿಕ, ಕು. ಡಿ. ಅನನ್ಯ ಇವರು ಮೆಣಸು, ಉಪ್ಪು, ಅರಿಶಿನ, ಸಕ್ಕರೆ, ಗೋಧಿಹಿಟ್ಟು ಆಹಾರ ಪದಾರ್ಥಗಳನ್ನು ಬಳಸಿ ಪ್ರಾತ್ಯಕ್ಷಿಕೆ ಮೂಲಕ ವಿದ್ಯಾರ್ಥಿಗಳಿಗೆ ಕಲಬೆರಕೆ ಆಹಾರದಿಂದ ಉಂಟಾಗಬಹುದಾದ ತೊಂದರೆಗಳ ಬಗ್ಗೆ ವಿವರಿಸಿದರು. ಆಹಾರ ಪದಾರ್ಥಗಳಲ್ಲಿ ಹಾನಿಕಾರಕವಾದ, ಅಸುರಕ್ಷಿತ ರಾಸಾಯನಿಕಗಳನ್ನು ಬಳಕೆ ಮಾಡುತ್ತಿರುವುದರಿಂದ ಉಂಟಾಗುವ ಪರಿಣಾಮಗಳ ಬಗ್ಗೆ ತಿಳಿಸಿದರು. ಆಹಾರವನ್ನು ತಾಜವಾಗಿಡಲು ಹಾಗೂ ಕೆಡದಂತೆ ಜೋಪಾನ ಮಾಡಲು ಬಳಸುವ ವಸ್ತುಗಳಿಂದ ಮಕ್ಕಳ ಆರೋಗ್ಯದ ಮೇಲೆ ವ್ಯತಿರಿಕ್ತವಾದ ಪರಿಣಾಮ ಉಂಟಾಗುತ್ತದೆ. ಮಕ್ಕಳ ಬೆಳವಣಿಗೆ ಇದರಿಂದ ಕುಂಠಿತವಾಗುವುದರೊಂದಿಗೆ ಮೆದುಳಿನ ಬೆಳವಣಿಗೆ ಕ್ಷೀಣಿಸುತ್ತದೆ ಎಂದು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಮತಿ ವಿಕ್ಟೋರಿಯಾ ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

□

## ಬಸವಣ್ಣನವರ ಚಿಂತನೆಗಳು ಆತ್ಮವಿಕಾಸದ ಮಾರ್ಗ




ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಏರ್ಪಡಿಸಿದ್ದ 'ಶ್ರೀ ಶಿವ ಸ್ಮರಣಾರ್ಥ ದತ್ತಿ ಉಪನ್ಯಾಸ : ಬಸವ ಚಿಂತನೆ' ಕಾರ್ಯಕ್ರಮದಲ್ಲಿ ಡಾ. ಬಿ.ವಿ. ವಸಂತ ಕುಮಾರ್‌ರವರು ಮಾತನಾಡುತ್ತಿರುವುದು.

ಬಸವಣ್ಣನವರ ಚಿಂತನೆಗಳು ಸಮಷ್ಟಿ ಸ್ವರೂಪ ಹೊಂದಿದ್ದು ಆತ್ಮವಿಕಾಸದ ಮಾರ್ಗವಾಗಿವೆ ಎಂದು ಹುಣಸೂರಿನ ಶ್ರೀ ಡಿ. ದೇವರಾಜ ಅರಸು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಬಿ.ವಿ. ವಸಂತ ಕುಮಾರ್‌ರವರು ತಿಳಿಸಿದರು.

**ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ** ಕನ್ನಡ ವಿಭಾಗದ ವತಿಯಿಂದ ದಿನಾಂಕ 4.11.2025 ರಂದು ಏರ್ಪಡಿಸಿದ್ದ 'ಶ್ರೀ ಶಿವ ಸ್ಮರಣಾರ್ಥ ದತ್ತಿ ಉಪನ್ಯಾಸ : ಬಸವ ಚಿಂತನೆ' ಕಾರ್ಯಕ್ರಮದಲ್ಲಿ ಅವರು 'ಬಸವಣ್ಣನವರ ದೈವಪರ ಚಿಂತನೆ' ವಿಷಯ ಕುರಿತು ಮಾತನಾಡಿದರು. ದೇವರು ಆಚರಣೆಯಲ್ಲಿ ಆವಿಷ್ಕಾರವಾಗುತ್ತಾನೆ. ಜೀವ ಮತ್ತು ದೈವ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ಮನಸ್ಸು ಸ್ವಸ್ಥವಾಗಿರಲು ಶರಣರ ಚಿಂತನೆಗಳು ಅವಶ್ಯಕವಾಗಿವೆ. ದೇಹ, ಜೀವ, ಆತ್ಮ, ಪರಮಾತ್ಮಗಳ ಸಮಾಗಮವನ್ನು ಬಸವಣ್ಣನವರು ತಮ್ಮ ವಚನಗಳಲ್ಲಿ ತಿಳಿಸಿದ್ದಾರೆ ಎಂದರು.

ನಿವೃತ್ತ ಪ್ರಾಧ್ಯಾಪಕರಾದ ಡಾ. ಹೆಚ್. ಎಂ. ಕಲಾಶ್ರೀಯವರು 'ಬಸವಣ್ಣನವರ ಜೀವಪರ ಚಿಂತನೆ' ವಿಷಯ ಕುರಿತು ಮಾತನಾಡುತ್ತಾ, ಹನ್ನೆರಡನೇ ಶತಮಾನದ ಶರಣ ಸಾಹಿತ್ಯ ಕ್ರಾಂತಿಯಾಗಿರದೆ ಅದು ತಾಯ್ತನದ ಜೀವಪರವಾದ ಚಳುವಳಿಯಾಗಿದೆ. ಶರಣರು ದುಡಿಮೆಯಲ್ಲಿ ದೇವರಿದ್ದಾನೆ ಎಂಬುದನ್ನು ಬಲವಾಗಿ ನಂಬುವುದರ ಜೊತೆಗೆ ಆಚರಣೆಯಲ್ಲೂ ತಂದರು. ಬಸವಣ್ಣನವರು ಮಾತೃ ಹೃದಯವನ್ನು ಹೊಂದಿದ್ದರು. ಮಾನವೀಯ ಮೌಲ್ಯಗಳ ಮೂರ್ತಿಯಾಗಿದ್ದರು ಎಂದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಮೊರಬದ ಮಲ್ಲಿಕಾರ್ಜುನರವರು ಪ್ರಸ್ತುತ ವರ್ತಮಾನಕ್ಕೆ ಬಸವಣ್ಣನವರು ವಿವೇಕದ ಪ್ರತಿನಿಧಿಯಾಗಿದ್ದಾರೆ. ದೇವಾಲಯದ ಸ್ವರೂಪ ಕುರಿತು ಬಸವಣ್ಣನವರ ಚಿಂತನೆ ಶ್ರೇಷ್ಠಮಟ್ಟದ್ದಾಗಿದೆ. ನಿರಾಕಾರ ಸ್ವರೂಪಿಯನ್ನು ಆಕಾರ ಮೂರ್ತಿಯನ್ನಾಗಿ ಪರಿಭಾವಿಸಿಕೊಳ್ಳಬೇಕು ಎಂದರು.

ಪ್ರಾಚಾರ್ಯರಾದ ಡಾ. ರೇಚಣ್ಣ, ದತ್ತಿದಾನಿಗಳಾದ ಡಾ. ಕೆ.ಎಸ್. ರಾಜಶೇಖರ, ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಆರ್.ಎಸ್. ಕುಮಾರ್

ಉಪಸ್ಥಿತರಿದ್ದರು. ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕು. ನಿಖಿತಾ ಮತ್ತು ವೃಂದದವರು ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕರುಗಳಾದ ಶ್ರೀ ಹೊನ್ನಶೆಟ್ಟಿ ಸ್ವಾಗತಿಸಿದರು. ಡಾ. ಸಿ. ಮಹೇಂದ್ರ ವಂದಿಸಿದರು. ಶ್ರೀ ಎಚ್.ಎಸ್. ಸಿದ್ಧಮಲ್ಲಿಕಾರ್ಜುನಸ್ವಾಮಿ ಕಾರ್ಯಕ್ರಮ ನಿರೂಪಿಸಿದರು.

## ಯಶಸ್ಸು ಸಾಧಿಸಲು ಸ್ಪಷ್ಟ ಗುರಿಗಳನ್ನು ಹೊಂದಿರುವುದು ಅತ್ಯಗತ್ಯ

ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಅರಿವು ಕಾರ್ಯಕ್ರಮವನ್ನು ದಿನಾಂಕ 05.11.2025ರಂದು ಆಯೋಜಿಸಲಾಗಿತ್ತು. ಕಾರ್ಯಕ್ರಮವು ಉದ್ಘಾಟಿಸಿದ ಮೈಸೂರು ವಿಶ್ವವಿದ್ಯಾನಿಲಯದ ಎಸ್‌ಸಿ – ಎಸ್‌ಟಿ ಕೋಶದ ಉಪಕುಲಸಚಿವರಾದ ಶ್ರೀ ಕೆ.ಎನ್. ಮಂಜುನಾಥರವರು ಮಾತನಾಡುತ್ತಾ, ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಸಾಧಿಸಲು ಸ್ಪಷ್ಟ ಗುರಿಗಳನ್ನು ಹೊಂದಿರುವುದು ಅತ್ಯಗತ್ಯ ವಿದ್ಯಾರ್ಥಿಗಳು ಉನ್ನತ ಶಿಕ್ಷಣವನ್ನು ಮುಂದುವರಿಸಬೇಕು. ಪ್ರಸ್ತುತ ಮತ್ತು ಭವಿಷ್ಯದ ಅಧ್ಯಯನಕ್ಕಾಗಿ ಮೈಸೂರು ವಿಶ್ವವಿದ್ಯಾಲಯದಿಂದ ಅನೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಉನ್ನತ ಶಿಕ್ಷಣಕ್ಕಾಗಿ ವಿದ್ಯಾರ್ಥಿವೇತನ, ಉಚಿತ ವಸತಿ ಸೌಕರ್ಯಗಳು, ಪಿಜಿ ಪ್ರವೇಶಕ್ಕಾಗಿ ಎ ಯೋಜನೆ ಮತ್ತು ಬಿ ಯೋಜನೆಯ ಕ್ರಮವಿಧಾನಗಳಂತಹ ಸೌಲಭ್ಯಗಳನ್ನು ನೀಡಲಾಗಿದೆ. ವಿದ್ಯಾರ್ಥಿ ಕಲ್ಯಾಣ ಕಾರ್ಯಕ್ರಮದ ಮೂಲಕ ಮೈಸೂರು ವಿಶ್ವವಿದ್ಯಾನಿಲಯವು ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ವಿಶೇಷ ಗ್ರಂಥಾಲಯ ಸೌಕರ್ಯಗಳನ್ನು ಒದಗಿಸುತ್ತಿದೆ. ಅಷ್ಟೇ ಅಲ್ಲದೆ ಸಂಶೋಧನೆಗಾಗಿ ಜೆಆರ್‌ಎಫ್ ಮತ್ತು ಎಸ್‌ಆರ್‌ಎಫ್ ಫೆಲೋಶಿಪ್‌ಗಳು ಹಾಗೂ ಸಂಶೋಧನಾ ಕಾರ್ಯಕ್ರಮಗಳಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ವೇತನ ಸೌಕರ್ಯಗಳನ್ನು ನೀಡಲಾಗುತ್ತಿದೆ ಎಂದರು.

ಮೈಸೂರು ಜಿಲ್ಲಾ ಸಮಾಜ ಕಲ್ಯಾಣ ಕಛೇರಿಯ ಅಧೀಕ್ಷಕರಾದ ಶ್ರೀ ಚಿಕ್ಕೀರಯ್ಯರವರು ಮಾತನಾಡುತ್ತಾ, ವಿವಿಧ ಯೋಜನೆಗಳಡಿ ಶಿಕ್ಷಣಕ್ಕಾಗಿ ವಿದ್ಯಾರ್ಥಿವೇತನಗಳು, ಉದ್ಯೋಗಾಧಾರಿತ ತರಬೇತಿ ಕಾರ್ಯಕ್ರಮಗಳು, ಉದ್ಯಮಶೀಲತಾ ತರಬೇತಿ ಕಾರ್ಯಕ್ರಮಗಳು, ಐಎಎಸ್ ಮತ್ತು ಕೆಎಎಸ್ ಪರೀಕ್ಷೆಗಳಿಗೆ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಉಚಿತ ತರಬೇತಿ ಕಾರ್ಯಕ್ರಮಗಳನ್ನು ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಸರ್ಕಾರ ನೀಡುತ್ತಿರುವ ಎಲ್ಲಾ ಯೋಜನೆಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು ಎಂದರು.

ವೇದಿಕೆಯಲ್ಲಿ ಪ್ರಾಚಾರ್ಯರಾದ ಡಾ. ರೇಚಣ್ಣನವರು ಎಸ್‌ಸಿ/ಎಸ್‌ಟಿ ಕೋಶದ ಸಂಚಾಲಕಿ ಶ್ರೀಮತಿ ಬಿ. ಸೌಮ್ಯ ಉಪಸ್ಥಿತರಿದ್ದರು. ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕು. ಧಾತ್ರಿ ಮತ್ತು ತಂಡದವರು ಪ್ರಾರ್ಥಿಸಿದರು. ಕು. ಐಶ್ವರ್ಯ ಸ್ವಾಗತಿಸಿದರು. ಕು. ಲಿಖಿತಾ ವಂದಿಸಿದರು. ಕು. ಕೆ. ಸೌಜನ್ಯ ಕಾರ್ಯಕ್ರಮ ನಿರೂಪಿಸಿದರು.

## ಜೆಎಸ್‌ಎಸ್ ಆಸ್ಪತ್ರೆಯ ಆರ್ಥೋಪೆಡಿಕ್ ವಿಭಾಗದಿಂದ ಮಹತ್ವದ ಶಸ್ತ್ರಚಿಕಿತ್ಸೆ

ಜೆಎಸ್‌ಎಸ್ ಆಸ್ಪತ್ರೆಯ ಕೀಲು ಮತ್ತು ಮೂಳೆಚಿಕಿತ್ಸಾ ವಿಭಾಗವು ಮೈಸೂರಿನಲ್ಲೇ ಮೊದಲ ಬಾರಿಗೆ, ಆರ್ಥ್ರೆಕ್ಸ್‌ನ ಅತ್ಯಾಧುನಿಕ ವರ್ಚುವಲ್ ಇಂಪ್ಲಾಂಟ್ ಪೊಸಿಷನಿಂಗ್ (ವಿಐಪಿ) ತಂತ್ರಜ್ಞಾನವನ್ನು ಬಳಸಿಕೊಂಡು ರಿವರ್ಸ್ ಟೋಟಲ್ ಶೋಲ್ಡರ್ ಆರ್ಥ್ರೋಪ್ಲಾಸ್ಟಿ (ಆರ್‌ಟಿಎಸ್‌ಎ) ಅನ್ನು ಯಶಸ್ವಿಯಾಗಿ ನಿರ್ವಹಿಸಿ ಆರೋಗ್ಯ ಕ್ಷೇತ್ರದಲ್ಲಿ ಐತಿಹಾಸಿಕ ಮೈಲಿಗಲ್ಲನ್ನು ಸಾಧಿಸಿದೆ.

ರಿವರ್ಸ್ ಟೋಟಲ್ ಶೋಲ್ಡರ್ ರಿಪ್ಲೇಸ್‌ಮೆಂಟ್



ಒಂದು ವಿಶೇಷ ರೀತಿಯ ಭುಜದ ಶಸ್ತ್ರಚಿಕಿತ್ಸೆಯಾಗಿದೆ. ಶಸ್ತ್ರಚಿಕಿತ್ಸೆಯ ಸಮಯದಲ್ಲಿ, ಶಸ್ತ್ರಚಿಕಿತ್ಸಕರು ಭುಜದ ಹಾನಿಗೊಳಗಾದ ಭಾಗಗಳನ್ನು ತೆಗೆದುಹಾಕಿ ಅವುಗಳನ್ನು ಕೃತಕ ಭಾಗಗಳೊಂದಿಗೆ ಬದಲಾಯಿಸುವ ಅತ್ಯಾಧುನಿಕ ಶಸ್ತ್ರಚಿಕಿತ್ಸೆಯಾಗಿದೆ. ಈ ವಿಧಾನವು ನಿರಂತರ ನೋವು, ದೈನಂದಿನ ಚಟುವಟಿಕೆಗಳಲ್ಲಿ ತೊಂದರೆ (ಕೂದಲು ಬಾಚುವುದು ಅಥವಾ ಬೆನ್ನಿಗೆ ಕೈ ತಲುಪುವುದು) ಮತ್ತು ತೀವ್ರ ರೋಟರ್ ಕಫ್ ಸಮಸ್ಯೆಗಳಿಂದ ಉಂಟಾಗುವ ಸೂಡೋ–ಪಾರ್ಶ್ವವಾಯುಗಳಿಂದ ಬಳಲುತ್ತಿರುವ ವ್ಯಕ್ತಿಗಳ ಸಮಸ್ಯೆಯನ್ನು ಪರಿಹರಿಸಲು ಸಹಾಯ ಮಾಡುತ್ತದೆ.

ಜೆಎಸ್‌ಎಸ್ ಆಸ್ಪತ್ರೆಯ ಮೂಳೆ ಮತ್ತು ಕೀಲು ವಿಭಾಗದ ಮುಖ್ಯಸ್ಥರಾದ ಡಾ. ಸಿದ್ಧಲಿಂಗಮೂರ್ತಿಯವರ ಮಾರ್ಗದರ್ಶನದಲ್ಲಿ ತಂಡದ ಸದಸ್ಯರಾದ ಡಾ. ಸಂತೋಷ್, ಡಾ. ಶ್ರೇಯಸ್ ಮತ್ತು ಡಾ. ಶಶಿಕುಮಾರ್ ಅವರ ಸಹಯೋಗದಿಂದ ಈ ಶಸ್ತ್ರ ಚಿಕಿತ್ಸೆಯನ್ನು ಮಾಡಲಾಗಿದೆ. ರೋಗಿಗಳ ಆರೈಕೆಯನ್ನು ಮುನ್ನಡೆಸುವಲ್ಲಿ ಜೆಎಸ್‌ಎಸ್ ಆಸ್ಪತ್ರೆಯ ಬದ್ಧತೆಯನ್ನು ತೋರಿಸುತ್ತದೆ.

ಇದು ಮೂಳೆಚಿಕಿತ್ಸೆಯಲ್ಲಿ ರೋಗಿಗಳಿಗೆ ಭರವಸೆಯ ದಾರಿದೀಪವಾಗಿದೆ. ಆರ್‌ಟಿಎಸ್‌ಎ ನಂತಹ ಅತ್ಯಾಧುನಿಕ ಕಾರ್ಯವಿಧಾನಗಳನ್ನು ಮೈಸೂರಿಗೆ ತರುವ ಮೂಲಕ ಜೆಎಸ್‌ಎಸ್ ಆಸ್ಪತ್ರೆ ಆರೋಗ್ಯ ರಕ್ಷಣೆಯಲ್ಲಿ ಮಂಚೂಣಿಯಲ್ಲಿದ್ದು ಕರ್ನಾಟಕದಲ್ಲಿ ಸುಧಾರಿತ ವೈದ್ಯಕೀಯ ಆರೈಕೆಗಾಗಿ ವಿಶ್ವಾಸಾರ್ಹ ಆಸ್ಪತ್ರೆಯಾಗಿದೆ.

ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಕುಲಪತಿಗಳಾದ ಡಾ. ಎಚ್. ಬಸವನಗೌಡಪ್ಪ, ಜೆಎಸ್‌ಎಸ್ ಆಸ್ಪತ್ರೆಯ ನಿರ್ದೇಶಕರಾದ ಡಾ. ಸಿ.ಪಿ. ಮಧು, ಜೆಎಸ್‌ಎಸ್ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಡಿ. ನಾರಾಯಣಪ್ಪ ಮತ್ತು ವಿಭಾಗದ ಮುಖ್ಯಸ್ಥರಾದ ಡಾ. ಸಿದ್ಧಲಿಂಗಮೂರ್ತಿಯವರ ಮಾರ್ಗದರ್ಶನದಿಂದ ಆಸ್ಪತ್ರೆಯ ಕೀಲು ಮತ್ತು ಮೂಳೆ ವಿಭಾಗವು ಈ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ಮಹತ್ವದ ವೈದ್ಯಕೀಯ ಮೈಲಿಗಲ್ಲನ್ನು ಸಾಧಿಸಿದೆ.

## ಕೃಷಿ ಯಂತ್ರೋಪಕರಣಗಳ ರಿಪೇರಿ ಕೌಶಲ್ಯ ತರಬೇತಿ

**ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದಲ್ಲಿ,** ಆತ್ಮ ಯೋಜನೆ ಕೃಷಿ ಇಲಾಖೆ ಹಾಗು ವಿಸಿಫಾರಂ ಸಹಯೋಗದೊಂದಿಗೆ 5 ದಿನಗಳ ಕೃಷಿ ತಂತ್ರಜ್ಞ ಹಾಗೂ ಕೃಷಿ ಯಂತ್ರೋಪಕರಣಗಳ ಕೌಶಲ್ಯ ತರಬೇತಿಯನ್ನು ದಿನಾಂಕ 17.11.2025 ರಿಂದ 21.11.2025ರವರೆಗೆ ಹಮ್ಮಿಕೊಳ್ಳಲಾಗಿತ್ತು.

ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹ ಸಂಶೋಧನಾ ನಿರ್ದೇಶಕರಾದ ಡಾ. ಬಿ.ಎಸ್. ಬಸವರಾಜುರವರು ಇಂದಿನ ಕೃಷಿಯಲ್ಲಿ ಕೃಷಿ ಕೆಲಸಗಾರರ ಕೊರತೆಯ ಕಾರಣ ಸಂಶೋಧಕರು ಕೃಷಿಗೆ ಸಂಬಂಧಿಸಿದ ಎಲ್ಲಾ ಕೃಷಿ ಯಂತ್ರೋಪಕರಣಗಳನ್ನು ಕಂಡು ಹಿಡಿದಿದ್ದಾರೆ. ರೈತರು ಇವುಗಳನ್ನು ಉಪಯೋಗಿಸಿಕೊಂಡು ಸಾಗುವಳಿ ಮಾಡಿ ಹೆಚ್ಚಿನ ಲಾಭ ಪಡೆದುಕೊಳ್ಳಬೇಕು ಎಂದರು.

ಗ್ರಾಮೀಣಾಭೀವೃದ್ಧಿ ನಿರ್ದೇಶಕರಾದ ಶ್ರೀ ಎನ್.ಎಂ. ಶಿವಶಂಕರಪ್ಪನವರು ಕೃಷಿ ಯಂತ್ರೋಪಕರಣಗಳನ್ನು ಉಪಯೋಗಿಸುವುದರ ಜೊತೆಗೆ ರೈತರು ತಕ್ಷಣಕ್ಕೆ ತಮ್ಮ ಸ್ಥಳದಲ್ಲಿಯೇ ರಿಪೇರಿ ಮಾಡಿಕೊಳ್ಳುವ ಸಲುವಾಗಿ ಈ ತರಬೇತಿಯನ್ನು ಆಯೋಜಿಸಿದ್ದು ರೈತರು ಇದರ ಸದುಪಯೋಗವನ್ನು ಪಡೆದುಕೊಂಡಿರುವುದು ಸಂತಸವಾಗಿದೆ ಎಂದರು.

ಜೆಎಸ್‌ಎಸ್ ಕೆವಿಕೆಯ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರಾದ ಡಾ. ಬಿ.ಎನ್. ಜ್ಞಾನೇಶ್‌ರವರು ರೈತರು ಒಂದು ಬೆಳೆಯನ್ನು ನೆಚ್ಚಿಕೊಳ್ಳದೆ ಸಮಗ್ರ ಕೃಷಿಪದ್ಧತಿಯನ್ನು ಅಳವಡಿಸಿಕೊಳ್ಳಬೇಕು. ಕೃಷಿ ಯಂತ್ರೋಪಕರಣಗಳನ್ನು ಉಪಯೋಗಿಸಲು ಹಾಗೂ ರಿಪೇರಿ ಮಾಡಲು ತಿಳಿದಿರಬೇಕು. ತಾವು ಪಡೆದಿರುವ ತರಬೇತಿಯನ್ನು ತಮ್ಮ ಸ್ಥಳದಲ್ಲಿನ ಇತರೆ ರೈತರಿಗೆ ತಿಳಿಸಿಕೊಡಬೇಕೆಂದು ಹೇಳಿದರು. ತರಬೇತುದಾರರಾದ ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಶ್ರೀದೇವಿಯವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ರೈತರಾದ ಶ್ರೀ ಹೆಚ್.ಡಿ. ರಮೇಶ್, ಶ್ರೀ ಶಫೀಉಲ್ಲಾ ಹಾಗೂ ಶ್ರೀ ಗಿರೀಶ್‌ರವರು ಅನಿಸಿಕೆಯನ್ನು ವ್ಯಕ್ತಪಡಿಸಿದರು. ಮೈಸೂರಿನ ಕೃಷಿ ಇಲಾಖೆಯ ಸಹಾಯಕ ತಾಂತ್ರಿಕ ವ್ಯವಸ್ಥಾಪಕರಾದ ಶ್ರೀ ಎಸ್.ಜೆ. ಹೇಮಂತ್, ಕೆವಿಕೆಯ ಶ್ರೀಮತಿ ಹೆಚ್.ವಿ. ದಿವ್ಯಾ ಹಾಗೂ ಡಾ. ದೀಪಕ್ ಇದ್ದರು. ಐದು ದಿನದ ಈ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ 42 ರೈತರು ತರಬೇತಿಯಲ್ಲಿ ಪಾಲ್ಗೊಂಡಿದ್ದರು.

□

## ತರಬೇತಿ ಕಾರ್ಯಕ್ರಮ

ಮೈಸೂರಿನ ಜೆಎಸ್‌ಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಕ್ಕಳ ವಿಭಾಗವು ದೆಹಲಿಯ ಬ್ರೆಸ್ಟ್‌ಫೀಡಿಂಗ್ ಪ್ರಮೋಷನ್ ನೆಟ್‌ವರ್ಕ್ ಆಫ್ ಇಂಡಿಯಾ ಸಹಯೋಗದೊಂದಿಗೆ, ಸ್ತನಪಾನ ಹಾಗೂ ಶಿಶು ಮತ್ತು ಮಕ್ಕಳ ಆಹಾರ ಸಲಹೆಗಾರರಿಗೆ 7 ದಿನಗಳ ತರಬೇತಿ ಕಾರ್ಯಕ್ರಮವನ್ನು ಜೆಎಸ್‌ಎಸ್ ಆಸ್ಪತ್ರೆಯ ನಿರ್ದೇಶಕರಾದ ಡಾ. ಸಿ.ಪಿ. ಮಧು ಹಾಗೂ ಜೆಎಸ್‌ಎಸ್ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಡಿ. ನಾರಾಯಣಪ್ಪ ಮತ್ತು ಜೆಎಸ್‌ಎಸ್ ಆಸ್ಪತ್ರೆಯ ಮಕ್ಕಳ ವಿಭಾಗದ ಮುಖ್ಯಸ್ಥರಾದ ಡಾ. ಎಸ್.ಎನ್. ಪ್ರಶಾಂತ್‌ರವರು ಉದ್ಘಾಟಿಸಿದರು.

ದಿನಾಂಕ 19.11.2025ರಿಂದ 25.11.2025ರವರೆಗೆ ನಡೆದ 7 ದಿನಗಳ ತರಬೇತಿ ಕಾರ್ಯಕ್ರಮದಲ್ಲಿ ಎರಡು ವರ್ಷದೊಳಗಿನ ಮಕ್ಕಳಿಗೆ ಸ್ತನಪಾನ ಸಮಾಲೋಚನೆ, ಪೂರಕ ಆಹಾರ, ಬೆಳವಣಿಗೆಯ ಮೇಲ್ವಿಚಾರಣೆ ಮತ್ತು ಹಾಲುಣಿಸುವ ಬಗ್ಗೆ ಆರೋಗ್ಯ ಸೇವಾ ಪೂರೈಕೆದಾರರ ಕೌಶಲ್ಯಗಳನ್ನು ಹೆಚ್ಚಿಸುವ ತರಬೇತಿಯನ್ನು ನೀಡಲಾಯಿತು. ಈ ತರಬೇತಿಯಲ್ಲಿ ಸ್ತನಪಾನ ಮತ್ತು ಹಾಲುಣಿಸುವ ಬಗ್ಗೆ ನಿರ್ವಹಣೆ, ಪೂರಕ ಆಹಾರಗಳನ್ನು ನೀಡುವ ಬಗ್ಗೆ ಅವರ ಕುಟುಂಬಗಳಿಗೆ ಮಾಹಿತಿ ನೀಡುವುದು, ಬೆಳವಣಿಗೆಯ ಮೇಲ್ವಿಚಾರಣೆ, ಎಚ್‌ಐವಿ–ಪಾಸಿಟಿವ್ ತಾಯಂದಿರಿಗೆ ಆಹಾರದ ಆಯ್ಕೆಗಳ ಬಗ್ಗೆ ಸಮಾಲೋಚನೆ ನಡೆಸಲಾಯಿತು. ಈ ತರಬೇತಿಯಲ್ಲಿ ಕೌಶಲ್ಯಗಳು ಮತ್ತು ಪ್ರಾಯೋಗಿಕ ಜ್ಞಾನವನ್ನು ನೀಡುವ ಮೂಲಕ ತಾಯಿ ಮತ್ತು ಮಕ್ಕಳ ಆರೋಗ್ಯದ ಫಲಿತಾಂಶಗಳನ್ನು ಸುಧಾರಿಸಲು ಮಾಹಿತಿಗಳನ್ನು ಹಂಚಿಕೊಳ್ಳಲಾಯಿತು.

ಸ್ತನಪಾನ ಪ್ರಚಾರ ಮತ್ತು ತರಬೇತಿಗೆ ಮೂರು ದಶಕಗಳಿಗೂ ಹೆಚ್ಚು ಕಾಲ ಬದ್ಧತೆಯನ್ನು ಹೊಂದಿರುವ ಪ್ರಮುಖ ರಾಷ್ಟ್ರೀಯ ಸಂಸ್ಥೆಯಾದ ಬಿಪಿಎನ್‌ಐ ದೇಶಾದ್ಯಂತ 2200ಕ್ಕೂ ಹೆಚ್ಚು ಸಲಹೆಗಾರರನ್ನು ಈಗಾಗಲೇ ಹೊಂದಿದೆ. ವಿವಿಧ ಪ್ರದೇಶಗಳಿಂದ ಒಟ್ಟು 24 ಆರೋಗ್ಯ ಸಲಹೆಗಾರರು ಈ ತರಬೇತಿಯಲ್ಲಿ ಭಾಗವಹಿಸಿದ್ದರು. ಜೆಎಸ್‌ಎಸ್ ಆಸ್ಪತ್ರೆಯ ಮಕ್ಕಳ ಚಿಕಿತ್ಸಾ ವಿಭಾಗವು ತಾಯಂದಿರು, ಶಿಶುಗಳು ಮತ್ತು ಸಮುದಾಯಕ್ಕೆ ನೇರವಾಗಿ ಪ್ರಯೋಜನಕಾರಿಯಾಗುವ ಕಾರ್ಯಕ್ರಮಗಳನ್ನು ನೀಡುವ ಮೂಲಕ ತಾಯಿ ಮತ್ತು ಮಕ್ಕಳ ಆರೋಗ್ಯದಲ್ಲಿ ಪ್ರಗತಿಯನ್ನು ಮುನ್ನಡೆಸಲು ಶ್ರಮಿಸುತ್ತಿದೆ.

ಕಾರ್ಯಕ್ರಮದಲ್ಲಿ ಬಿಪಿಎನ್‌ಐ ರಾಷ್ಟ್ರೀಯ ತರಬೇತುದಾರರೂ ದಾವಣಗೆರೆ ಜೆಜೆಎಂಸಿಯ ಪ್ರಾಧ್ಯಾಪಕರೂ ಮತ್ತು ನಿಕಟಪೂರ್ವ ಮುಖ್ಯಸ್ಥರಾದ ಡಾ. ಸಿ.ಆರ್. ಬನಪುರಮಠ, ಬಿಪಿಎನ್‌ಐ ರಾಷ್ಟ್ರೀಯ ತರಬೇತುದಾರರು ಮತ್ತು ಆಂಧ್ರಪ್ರದೇಶದ ತರಬೇತಿ ಕೋರ್ಸ್ ಸಂಯೋಜಕರಾದ ಡಾ. ಕೆ. ಕೇಶವಲು, ಎಸ್‌ಎಸ್‌ಐಎಂ ಮತ್ತು ಆರ್‌ಸಿಯ ಮಕ್ಕಳ ವಿಭಾಗದ ಪ್ರಾಧ್ಯಾಪಕರಾದ ಡಾ. ಜಿ.ಎಸ್. ಲತಾ, ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಸಹ ಪ್ರಾಧ್ಯಾಪಕರಾದ ಡಾ. ಬಿ.ಕೆ. ಉಷಾ, ಜೆಎಸ್‌ಎಸ್ ಆಸ್ಪತ್ರೆಯ ನರ್ಸಿಂಗ್ ಸೇವೆಗಳ ಮುಖ್ಯಸ್ಥರಾದ ಶ್ರೀಮತಿ ಜಾನೆಟ್ ಮಥಿಯಾಸ್‌ರವರುಗಳು ಉಪಸ್ಥಿತರಿದ್ದರು.

## ಉಚಿತ ಆರೋಗ್ಯ ತಪಾಸಣಾ ಶಿಬಿರ




**ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ** ರಾಷ್ಟ್ರೀಯ ಸೇವಾ ಯೋಜನೆಯ ಘಟಕದ ವತಿಯಿಂದ ದಿನಾಂಕ 14.11.2025ರಂದು ಮೈಸೂರಿನ ಕುದುರೆಮಾಳ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ಶಿಬಿರವನ್ನು ಕೆವಿಸಿ ಆಸ್ಪತ್ರೆಯ ವೈದ್ಯರಾದ ಡಾ. ದಿವ್ಯ ರವರು ಉದ್ಘಾಟಿಸಿದರು. ಕೆವಿಸಿ ಆಸ್ಪತ್ರೆಯ ಕಾರ್ಪೊರೇಟ್ ಮ್ಯಾನೇಜರ್ ಶ್ರೀ ಗಣೇಶ್‌ರವರು ಮಾತನಾಡುತ್ತಾ, ಸ್ವಚ್ಛ ಪರಿಸರ, ಶುದ್ಧವಾದ ನೀರು, ಉತ್ತಮ ಯೋಗಾಭ್ಯಾಸಗಳು ಸದೃಢ ಆರೋಗ್ಯ ಹೊಂದಲು ಸಹಕಾರಿ ಎಂದರು. ಎಎಸ್‌ಜಿ ಕಣ್ಣಿನ ಆಸ್ಪತ್ರೆಯ ಕಾರ್ಯ ನಿರ್ವಾಹಕರಾದ ಜಾರ್ಜ್‌ರವರು ಮಾತನಾಡುತ್ತಾ, ಪ್ರತಿಯೊಬ್ಬರಿಗೂ ಆರೋಗ್ಯವೇ ನಿಜವಾದ ಸಂಪತ್ತಾಗಿದ್ದು, ಕಣ್ಣಿನ ಮಹತ್ವ ಮತ್ತು ರಕ್ಷಣೆಯ ಬಗ್ಗೆ ತಿಳಿದುಕೊಳ್ಳಬೇಕು. ಆರೋಗ್ಯವೇ

ಭಾಗ್ಯ ಎಂಬುದನ್ನು ಅರಿತುಕೊಳ್ಳಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲರಾದ ಡಾ. ರೇಚಣ್ಣರವರು, ರಾಷ್ಟ್ರೀಯ ಸೇವಾ ಯೋಜನೆಯ ಮಹತ್ವವನ್ನು ತಿಳಿಸಿ, ಘಟಕದ ವತಿಯಿಂದ ದತ್ತು ಗ್ರಾಮವನ್ನಾಗಿ ಸ್ವೀಕರಿಸಿ ಸ್ವಚ್ಛತೆ ಮತ್ತು ನೈರ್ಮಲ್ಯ ಕುರಿತಂತೆ ಗ್ರಾಮದಲ್ಲಿ ಕೈಗೊಳ್ಳಬಹುದಾದ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು.

ಶಿಬಿರದಲ್ಲಿ ರಕ್ತದೊತ್ತಡ ಮಧುಮೇಹ ಮತ್ತು ಉಚಿತ ಕಣ್ಣಿನ ತಪಾಸಣೆ ಪರೀಕ್ಷೆಗಳನ್ನು ನಡೆಸಲಾಯಿತು. 163 ಫಲಾನುಭವಿಗಳು ತಪಾಸಣೆಗೆ ಒಳಪಟ್ಟರು. ಗ್ರಾಮದ ಮುಖಂಡರಾದ ಶ್ರೀ ಮುರುಗೇಶ್, ಕಾರ್ಯಕ್ರಮಾಧಿಕಾರಿಗಳಾದ ಡಾ. ಎ ಜಿ ಧರ್ಮೇಶ, ಶ್ರೀಮತಿ ಅನುಷಾ ಉಪಸ್ಥಿತರಿದ್ದರು. ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂಸೇವಕರು, ಅಧ್ಯಾಪಕರು ಮತ್ತು ಅಧ್ಯಾಪಕೇತರ ವರ್ಗದವರು ಭಾಗವಹಿಸಿದ್ದರು.

□

## ವಿದ್ಯಾರ್ಥಿನಿಲಯಗಳು ಎರಡನೆಯ ಮನೆ ಇದ್ದಂತೆ

ಭವಿಷ್ಯದ ಕನಸುಗಳನ್ನು ಹೊತ್ತು ಅಧ್ಯಯನ ಮಾಡಲು ವಿವಿಧ ಕಡೆಗಳಿಂದ ಕಾಲೇಜಿಗೆ ವಿದ್ಯಾರ್ಥಿಗಳು ಆಗಮಿಸುತ್ತಾರೆ. ಕೆಲವರು ಸ್ಥಳೀಯರಾದರೆ, ಇನ್ನೂ ಕೆಲವರು ದೂರದ ಊರುಗಳಿಂದ ಬರುತ್ತಾರೆ. ಇಂಥವರಿಗೆ ವಿದ್ಯಾರ್ಥಿನಿಲಯಗಳು ಎರಡನೆಯ ಮನೆ ಇದ್ದಂತೆ ಎಂದು ಜೆಎಸ್‌ಎಸ್ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಹೇಳಿದರು.

ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಜೆಎಸ್‌ಎಸ್ ಕಾಲೇಜು ಮಹಿಳಾ ವಸತಿನಿಲಯದ ವೇದಿಕೆ ವತಿಯಿಂದ ನಡೆದ ಮೈಸೂರು ಅಂತರ ಮಹಿಳಾ ವಿದ್ಯಾರ್ಥಿ ನಿಲಯಗಳ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳ ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪರಮಪೂಜ್ಯರ ಆಶೀರ್ವಾದದೊಂದಿಗೆ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳನ್ನು ವಿದ್ಯಾರ್ಥಿನಿಲಯಗಳಲ್ಲಿಯೂ ಆಚರಿಸಲಾಗುತ್ತಿದೆ. ವಿವಿಧ ವಿದ್ಯಾರ್ಥಿನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ನಡುವೆ ಪರಸ್ಪರ ಸಾಂಸ್ಕೃತಿಕ ಕೊಳುಕೊಡುಗೆಯನ್ನುಂಟುಮಾಡಲು ಇದರಿಂದ ಸಾಧ್ಯವಾಗುತ್ತಿದೆ. ವಿದ್ಯಾರ್ಥಿಗಳು ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ನಾಯಕತ್ವ, ವಾಕ್‌ಚಾತುರ್ಯ, ಆತ್ಮವಿಶ್ವಾಸ, ಧೈರ್ಯ, ಸ್ಥೈರ್ಯ, ಸಂಘಟನಾ ಚತುರತೆ ಗುಣಗಳು ಬೆಳೆಯುತ್ತವೆ. ಪ್ರತಿಭೆಯ ಅನಾವರಣ ಆಗಬೇಕೆಂಬುದೇ ಈ ವೇದಿಕೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಪ್ರಾಸ್ತಾವಿಕ ನುಡಿಗಳೊಂದಿಗೆ ಸ್ವಾಗತಿಸಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ. ಪ್ರಭುರವರು ವಿದ್ಯಾರ್ಥಿಗಳು ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಂದ ಮನೋಸ್ಥೈರ್ಯ ಮತ್ತು ಆತ್ಮಬಲವನ್ನು ವೃದ್ಧಿಸಿಕೊಳ್ಳಬಹುದು. ಇಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿಕೊಳ್ಳಬೇಕು ಎಂದರು.

ಕು. ಅಯ್ಯಂಗಾರ್ ಸುರಭಿ ಪ್ರಾರ್ಥಿಸಿದರು. ಡಾ. ಬಿ.ಎಸ್. ಸುದೀಪ್ ನಿರೂಪಿಸಿದರು. ಡಾ. ಬಿ. ಪ್ರಭುಸ್ವಾಮಿ ವಂದಿಸಿದರು. ದೈಹಿಕ ನಿರ್ದೇಶಕರಾದ ಶ್ರೀ ಎಂ. ಕಾರ್ತಿಕ್ ಮತ್ತು ನಿಲಯಪಾಲಕರಾದ ಶ್ರೀಮತಿ ಬಿ.ಬಿ. ಚೈತ್ರ ಉಪಸ್ಥಿತರಿದ್ದರು. ವಿವಿಧ ಮಹಿಳಾ ವಿದ್ಯಾರ್ಥಿ ನಿಲಯಗಳಿಂದ 105 ಮಂದಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

## ಶಿಕ್ಷಣ ವ್ಯಕ್ತಿಯ ಆಲೋಚನೆಯ ದಿಗಂತವನ್ನು ವಿಸ್ತರಿಸುತ್ತದೆ

ಶಿಕ್ಷಣ ವ್ಯಕ್ತಿಯ ಆಲೋಚನೆಯ ದಿಗಂತವನ್ನು ವಿಸ್ತರಿಸುತ್ತದೆ ಎಂದು ಚಾಮರಾಜನಗರದ ಜೆಎಸ್ಎಸ್ ಪ್ರಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರಾದ ಡಾ. ಕೆ.ಸಿ. ಬಸವಣ್ಣರವರು ತಿಳಿಸಿದರು.

ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್ಎಸ್ ಮಹಿಳಾ ಕಾಲೇಜಿನ ಯೂತ್ ರೆಡ್ ಕ್ರಾಸ್ ವತಿಯಿಂದ ದಿನಾಂಕ 11.11.2025ರಂದು ಹಮ್ಮಿಕೊಂಡಿದ್ದ ರಾಷ್ಟ್ರೀಯ ಶಿಕ್ಷಣ ದಿನದ ಕಾರ್ಯಕ್ರಮದಲ್ಲಿ 'ಕೃತಕ ಬುದ್ಧಿಮತ್ತೆ ಮತ್ತು ಶಿಕ್ಷಣ' ವಿಷಯ ಕುರಿತಂತೆ ಅವರು ಮಾತನಾಡಿದರು. ಪ್ರಸ್ತುತ ವರ್ತಮಾನಕ್ಕೆ ತಕ್ಕಂತೆ ಶಿಕ್ಷಣ ವ್ಯವಸ್ಥೆ ಬೆಳವಣಿಗೆ ಕಂಡಿದೆ. ಶಿಕ್ಷಣ ದಿನ ಎರಡನೇ ವಿಶ್ವ ಮಹಾಯುದ್ಧ ಅಂತ್ಯಗೊಂಡ ದಿನವಾದ್ದರಿಂದ ಹುತಾತ್ಮರ ದಿನವೂ ಆಗಿರುವುದು ವಿಶೇಷವಾಗಿದೆ. ನಾವು ಯುದ್ಧದಿಂದ ಶಾಂತಿಯ ಕಡೆಗೆ, ಶಾಂತಿಯಿಂದ ಉತ್ತಮ ಶಿಕ್ಷಣದ ಕಡೆಗೆ ಸಾಗಬೇಕಿದೆ. ಮೌಲಾನಾ ಅಬುಲ್ ಕಲಾಂ ಆಜಾದ್ ಅವರು ಶಿಕ್ಷಣ ವ್ಯವಸ್ಥೆಗೆ ನೀಡಿರುವ ಕೊಡುಗೆ ಅಪಾರ. ಇವರು ಸ್ವಾತಂತ್ರ್ಯ ಹೋರಾಟಗಾರರು, ಬರಹಗಾರರು ಮತ್ತು ಶಿಕ್ಷಣ ಪ್ರೇಮಿಯಾಗಿದ್ದರು. ಶಿಕ್ಷಣ ದೊಡ್ಡ ಶಕ್ತಿ ಎಂಬುದನ್ನು ಅರಿತುಕೊಂಡು ವಿದ್ಯಾರ್ಥಿಗಳು ಉತ್ಪಾದಕ ಕೈಗಳಾಗಬೇಕು ಎಂದರು.

ವೇದಿಕೆಯಲ್ಲಿ ಪರೀಕ್ಷಾ ನಿಯಂತ್ರಣಾಧಿಕಾರಿಗಳಾದ ಶ್ರೀ ಎಂ.ಎಂ. ಸ್ವಾಮಿಯವರು ಉಪಸ್ಥಿತರಿದ್ದರು. ಕು. ಧಾತ್ರಿ ಮತ್ತು ತಂಡದವರು ಪ್ರಾರ್ಥಿಸಿದರು. ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಸೋಮಣ್ಣ ಸ್ವಾಗತಿಸಿದರು. ಭೂಗೋಳಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಎನ್. ನಾಗಲಾಂಬಿಕೆ ವಂದಿಸಿದರು. ಗಣಕ ವಿಜ್ಞಾನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಕು. ಎ.ಎನ್. ರೂಪಶ್ರೀ ಕಾರ್ಯಕ್ರಮ ನಿರೂಪಿಸಿದರು.

## ಶ್ರೀ ಎಸ್. ರವಿಯವರಿಗೆ ಶ್ರದ್ಧಾಂಜಲಿ

ಜೆಎಸ್ಎಸ್ ಮಹಾವಿದ್ಯಾಪೀಠದ ಹಣಕಾಸು ವಿಭಾಗದಲ್ಲಿ ಅಧಿಕಾರಿಗಳಾಗಿ ಸೇವೆ ಸಲ್ಲಿಸಿದ್ದ ಶ್ರೀ ಎಸ್. ರವಿಯವರು ಇತ್ತೀಚೆಗೆ ದೈವಾಧೀನರಾದ ಕಾರಣ ಮಹಾವಿದ್ಯಾಪೀಠದಲ್ಲಿ ದಿನಾಂಕ 15.11.2025ರಂದು ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠರವರ ಅಧ್ಯಕ್ಷತೆಯಲ್ಲಿ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಹಣಕಾಸು ವಿಭಾಗದ ನಿರ್ದೇಶಕರಾದ ಶ್ರೀ ಎಸ್. ಪುಟ್ಟಸುಬ್ಬಪ್ಪನವರು ಶ್ರೀ ರವಿಯವರು ಇಂದೋರ್‌ನ ಇಂಡಿಯನ್ ಬ್ಯಾಂಕ್‌ನಲ್ಲಿ ಅಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದರು. ಅಲ್ಲಿ ಸ್ವಯಂನಿವೃತ್ತಿ ಪಡೆದು ನಂತರ ಜೆಎಸ್ಎಸ್ ಮಹಾವಿದ್ಯಾಪೀಠದಲ್ಲಿ ಮೂರು ವರ್ಷಗಳ ಕಾಲ ಸೇವೆಯನ್ನು ಸಲ್ಲಿಸಿದ್ದಾರೆ. ಸಹೋದ್ಯೋಗಿಗಳೊಂದಿಗೆ ಉತ್ತಮ ಒಡನಾಟವನ್ನು ಹೊಂದಿದ್ದರು ಎಂದು ಸ್ಮರಿಸಿದರು.

ಹಣಕಾಸು ವಿಭಾಗದ ಉಪನಿರ್ದೇಶಕರಾದ ಶ್ರೀ ಹೆಚ್.ಜಿ. ರವೀಂದ್ರರವರು ಮಾತನಾಡಿ, ಶ್ರೀ ರವಿಯವರು ಸದಾ ಹಸನ್ಮುಖಿಗಳು, ಶಿಸ್ತುಬದ್ಧ ಜೀವನವನ್ನು ನಡೆಸುತ್ತಿದ್ದರು. ಹಣಕಾಸು ವ್ಯವಹಾರಗಳ ಬಗ್ಗೆ ಉತ್ತಮ ಜ್ಞಾನವನ್ನು ಹೊಂದಿದ್ದರು. ಇಂಗ್ಲಿಷ್ ಭಾಷೆಯಲ್ಲಿ ಅಪಾರ ಜ್ಞಾನವನ್ನು ಉಳ್ಳವರಾಗಿದ್ದರು. ರಾಜಕೀಯ ವಿಶ್ಲೇಷಣೆಯಲ್ಲಿ ಚತುರತೆಯನ್ನು ಹೊಂದಿದ್ದರು ಎಂದು ಹೇಳಿದರು.

ಮೃತರ ಆತ್ಮಕ್ಕೆ ಶಾಂತಿಯನ್ನು ಕೋರಿ ಎರಡು ನಿಮಿಷಗಳ ಮೌನಾಚರಣೆಯನ್ನು ಮಾಡಲಾಯಿತು. ಕುಟುಂಬವರ್ಗದವರಿಗೆ ಅವರ ಅಗಲುವಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲೆಂದು ಪ್ರಾರ್ಥಿಸಲಾಯಿತು.



ಜೆಎಸ್‌ಎಸ್ ಮಹಾವಿದ್ಯಾಪೀಠದ ಹಣಕಾಸು ವಿಭಾಗದಲ್ಲಿ ಅಧಿಕಾರಿಗಳಾಗಿ ಸೇವೆ ಸಲ್ಲಿಸಿದ್ದ ಶ್ರೀ ಎಸ್. ರವಿಯವರು ಇತ್ತೀಚೆಗೆ ದೈವಾಧೀನರಾದ ಕಾರಣ ಮಹಾವಿದ್ಯಾಪೀಠದಲ್ಲಿ ದಿನಾಂಕ 15.11.2025ರಂದು ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠರವರ ಅಧ್ಯಕ್ಷತೆಯಲ್ಲಿ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು. ಶ್ರೀ ಶಿವಮಾದಪ್ಪ, ಪ್ರೊ. ಮೊರಬದ ಮಲ್ಲಿಕಾರ್ಜುನ, ಶ್ರೀ ಎಸ್. ಪುಟ್ಟಸುಬ್ಬಪ್ಪ, ಶ್ರೀ ಕೆ.ಆರ್. ಸಂತಾನಂ, ಶ್ರೀ ಹೆಚ್.ಜಿ. ರವೀಂದ್ರ ಹಾಗೂ ಸಿಬ್ಬಂದಿವರ್ಗದವರುಗಳಿದ್ದಾರೆ.

ನಿರ್ದೇಶಕರುಗಳಾದ ಶ್ರೀ ಕೆ.ಆರ್. ಸಂತಾನಂ, ಪ್ರೊ. ಮೊರಬದ ಮಲ್ಲಿಕಾರ್ಜುನ, ಶ್ರೀ ಆರ್. ಮಹೇಶ್, ಶ್ರೀ ಸುರೇಶ್‌ಬಾಬು, ಉಪ ನಿರ್ದೇಶಕರಾದ ಶ್ರೀ ಶಿವಮಾದಪ್ಪನವರುಗಳು ಹಾಗೂ ಹಣಕಾಸು ವಿಭಾಗದ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು. □

## ವಿಶ್ವ ಪ್ರತಿಜೀವಕ ಪ್ರತಿರೋಧ ಸಪ್ತಾಹ ಜಾಗೃತಿ ಜಾಥಾ

**ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ** ದಿನಾಂಕ 24.11.2025ರಂದು ವಿಶ್ವ ಪ್ರತಿಜೀವಕ ಪ್ರತಿರೋಧ ಸಪ್ತಾಹದ ಅಂಗವಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಸ್ಪತ್ರೆಯ ಸೋಂಕು ನಿಯಂತ್ರಣ ವಿಭಾಗದ ವತಿಯಿಂದ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಯಿತು, ಜಾಥಾಕ್ಕೆ ಆಸ್ಪತ್ರೆಯ ನಿರ್ದೇಶಕರಾದ ಡಾ. ಸಿ.ಪಿ. ಮಧುರವರು ಚಾಲನೆ ನೀಡಿ ಮಾತನಾಡುತ್ತಾ, ಪ್ರತಿ ಜೀವಕಗಳನ್ನು ಸಾಮಾನ್ಯವಾಗಿ ಸೋಂಕು ನಿವಾರಣೆಗೆ ಬಳಸುತ್ತಾರೆ. ಆದರೆ ಇದರ ದುರ್ಬಳಕೆಯಿಂದ ಸೋಂಕು ಉಂಟು ಮಾಡುವ ಸೂಕ್ಷ್ಮಜೀವಾಣುಗಳಿಗೆ ಈ ಔಷಧಿಗಳ ಮೇಲೆ ನಿರೋಧಶಕ್ತಿ ಬರುತ್ತದೆ. ಇದರಿಂದ ಔಷಧಿಯು ರೋಗ ನಿವಾರಣೆಯಲ್ಲಿ ವಿಫಲವಾಗುತ್ತದೆ. ನಮ್ಮ ದೇಶದಲ್ಲಿ ಪ್ರತಿಜೀವಕಗಳನ್ನು ವೈದ್ಯರ ಸಲಹಾ ಚೀಟಿ ಇಲ್ಲದೆ ಉಪಯೋಗಿಸುವುದರಿಂದ ಈ ಸಮಸ್ಯೆಯು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಹೀಗೆ ಅಸಮರ್ಪಕವಾಗಿ ಅಪೂರ್ಣವಾಗಿ ಈ ಔಷಧಿಗಳನ್ನು ತೆಗೆದುಕೊಳ್ಳುವುದು ಹಾಗೂ ಅನಗತ್ಯವಾಗಿ ಉಪಯೋಗಿಸುವುದರ ವಿರುದ್ಧ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅನಿವಾರ್ಯ ಮತ್ತು ಅವಶ್ಯಕ ಎಂದರು.

ಜೆಎಸ್‌ಎಸ್ ಆಸ್ಪತ್ರೆಯು ಆಯೋಜಿಸಿದ್ದ ಜಾಗೃತಿ ನಡಿಗೆಯಲ್ಲಿ ಆಸ್ಪತ್ರೆ ಸಿಬ್ಬಂದಿಗಳು, ಜೆಎಸ್‌ಎಸ್ ಮೆಡಿಕಲ್ ಕಾಲೇಜು ಮತ್ತು ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್ ವಿದ್ಯಾರ್ಥಿಗಳು ಸೇರಿ ಸುಮಾರು 200 ಜನರು ಭಾಗವಹಿಸಿ ವೈದ್ಯರು ಸೂಚಿಸಿದಾಗ ಮಾತ್ರ ಪ್ರತಿಜೀವಕಗಳನ್ನು ಬಳಸಬೇಕು, ವೈದ್ಯರು ಸೂಚಿಸಿದಂತೆ ನಿರ್ದಿಷ್ಟ ಅವಧಿಗೆ ಮತ್ತು ಸರಿಯಾದ ಪ್ರಮಾಣದಲ್ಲಿ




ಔಷಧಿ ತೆಗೆದುಕೊಳ್ಳಿ, ಸಾಮಾನ್ಯ ನೈರ್ಮಲ್ಯವನ್ನು ಕಾಪಾಡಿಕೊಳ್ಳಿ ಎಂಬ ವಾಕ್ಯಗಳ ಭಿತ್ತಿಚಿತ್ರಗಳನ್ನು ಪ್ರದರ್ಶಿಸುತ್ತಾ ಸಾರ್ವಜನಿಕರಿಗೆ ಅರಿವು ಮೂಡಿಸಿದರು. ಈ ನಡಿಗೆ ಅಭಿಯಾನವು ಜೆಎಸ್‌ಎಸ್ ಆಸ್ಪತ್ರೆಯಿಂದ ಹೊರಟು ಜೆಎಸ್‌ಎಸ್ ಮಹಾವಿದ್ಯಾಪೀಠ ವೃತ್ತ, ಅಗ್ರಹಾರ ವೃತ್ತ ಮೂಲಕ ಸ್ವಸ್ಥಾನಕ್ಕೆ ಹಿಂದಿರುಗಿತು.

ಜಾಗೃತಿ ಜಾಥದಲ್ಲಿ ಜೆಎಸ್‌ಎಸ್ ಆಸ್ಪತ್ರೆಯ ಸ್ಥಾನೀಯ ವೈದ್ಯಾಧಿಕಾರಿಗಳಾದ ಡಾ. ಶಾಂತಮಲ್ಲಪ್ಪ, ವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ. ವೈ.ಎಸ್. ರವಿಕುಮಾರ್, ಪ್ರಾಧ್ಯಾಪಕರಾದ ಡಾ. ಸುಭಾಷ್‌ಚಂದ್ರ, ಮೈಕ್ರೋ ಬಯಾಲಜಿ ವಿಭಾಗದ ಮುಖ್ಯಸ್ಥರಾದ ಡಾ. ತೇಜಶ್ರೀ, ಆಸ್ಪತ್ರೆ ಸೋಂಕು ನಿಯಂತ್ರಣ ಸಮಿತಿಯ ಅಧ್ಯಕ್ಷರಾದ ಡಾ. ರಶ್ಮಿ ಪಿ. ಮಹಾಲೆ, ಡಾ. ನೀತು ಮೂರ್ತಿ, ಆಡಳಿತಾಧಿಕಾರಿಗಳಾದ ಶ್ರೀ ಲೋಕೇಶ್ ಹಾಗೂ ಎಲ್ಲಾ ವಿಭಾಗಗಳ ಮುಖ್ಯಸ್ಥರು ಮತ್ತು ಸಿಬ್ಬಂದಿವರ್ಗದವರು ಹಾಜರಿದ್ದರು.

## ಪ್ರತಿಭಾ ಕಾರಂಜಿಯಲ್ಲಿ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ಸಾಧನೆ

ನಂಜನಗೂಡಿನ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ಸುತ್ತೂರಿನ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ವಿವಿಧ ವಿಭಾಗಗಳ ಸ್ಪರ್ಧೆಯಲ್ಲಿ ಭಾಗವಹಿಸಿ 15 ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದು ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ.

**1ರಿಂದ 4ನೇ ತರಗತಿ ವೈಯಕ್ತಿಕ ಸ್ಪರ್ಧೆ:** ತನುಶ್ರೀ – ಕನ್ನಡ ಕಂಠಪಾಠ ಪ್ರಥಮ, ಗೌತಮಿ – ಇಂಗ್ಲಿಷ್ ಕಂಠಪಾಠ ಪ್ರಥಮ, ಸ್ಫೂರ್ತಿ – ದೇಶಭಕ್ತಿಗೀತೆ ದ್ವಿತೀಯ, ಎಸ್. ವಿಭಾ – ಕಥೆ ಹೇಳುವುದು – ಪ್ರಥಮ, ಗುಣಶ್ರೀ ತೃತೀಯ, ಪ್ರಿಶ್ಮಿತಾ–ಛದ್ಮ ವೇಷ ತೃತೀಯ, ವಿಭಾ – ಅಭಿನಯ ಗೀತೆ ಪ್ರಥಮ, ಅನುಶ್ರೀ – ಧಾರ್ಮಿಕ ಪಠಣ ಸಂಸ್ಕೃತ ಪ್ರಥಮ, ಪ್ರಾರ್ಥನ – ಭಕ್ತಿ ಗೀತೆ ದ್ವಿತೀಯ, ಪ್ರೇಕ್ಷಾ – ತೃತೀಯ ಬಹುಮಾನಗಳನ್ನು ಪಡೆದಿದ್ದಾರೆ.

**5ರಿಂದ 7ನೇ ತರಗತಿ ವೈಯಕ್ತಿಕ ಸ್ಪರ್ಧೆ:** ನೀಲಾ ಮಂಜುನಾಥ್ – ಕನ್ನಡ ಕಂಠಪಾಠ ಪ್ರಥಮ, ಲಾವಣ್ಯ – ದ್ವಿತೀಯ, ನಮಿತಾ – ಇಂಗ್ಲಿಷ್ ಕಂಠಪಾಠ ಪ್ರಥಮ, ಪೂರ್ವಿ – ಹಿಂದಿ ಕಂಠಪಾಠ ಪ್ರಥಮ, ರಶ್ಮಿ ಎಸ್. –



ಸುತ್ತೂರು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ವಿವಿಧ ವಿಭಾಗಗಳ ಸ್ಪರ್ಧೆಯಲ್ಲಿ ವಿಜೇತರಾದ ಸುತ್ತೂರು ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳೊಂದಿಗೆ ಮುಖ್ಯೋಪಾಧ್ಯಾಯರುಗಳು ಹಾಗೂ ತರಬೇತಿ ನೀಡಿದ ಶಿಕ್ಷಕರನ್ನು ಕಾಣಬಹುದು.

ದ್ವಿತೀಯ, ನಿಹಾರಿಕ – ಧಾರ್ಮಿಕ ಪಠಣ ಸಂಸ್ಕೃತ ಪ್ರಥಮ, ಪೂರ್ವಿ – ದೇಶಭಕ್ತಿ ಗೀತೆ ಪ್ರಥಮ, ಖುಷಿ – ದ್ವಿತೀಯ, ಹನುಮಂತಮ್ಮ –ಕಥೆ ಹೇಳುವುದು ಪ್ರಥಮ, ಖುಷಿ – ಆಶುಭಾಷಣ ತೃತೀಯ, ವೈಷ್ಣವಿ – ಅಭಿನಯ ಗೀತೆ ಪ್ರಥಮ, ದೀಪ – ಕ್ಲೇಮಾಡಲಿಂಗ್ ಪ್ರಥಮ, ಪೃಥ್ವಿ – ಭಕ್ತಿ ಗೀತೆ ಪ್ರಥಮ, ಸ್ವರೂಪ – ದ್ವಿತೀಯ, ಶಿವಾನಿ – ಪ್ರಬಂಧ ರಚನೆ ದ್ವಿತೀಯ, ಪಲ್ಲವಿ – ತೃತೀಯ, ಭೂಮಿಕಾ ಪಾಟೀಲ್– ಕವನ ವಾಚನ ದ್ವಿತೀಯ, ಭೀಮಪ್ಪ – ಮಿಮಿಕ್ರಿ ಪ್ರಥಮ, ವೀರಭದ್ರ – ತೃತೀಯ ಬಹುಮಾನಗಳನ್ನು ಗಳಿಸಿದ್ದಾರೆ. ಇವರ ಸಾಧನೆಯನ್ನು ಸಂಸ್ಥೆಯ ಆಡಳಿತಾಧಿಕಾರಿಗಳು, ಮುಖ್ಯಸ್ಥರು, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರು ಅಭಿನಂದಿಸಿದ್ದಾರೆ.

## ನೈಸರ್ಗಿಕ ಕೃಷಿಯ ಶೃಂಗಸಭೆ–ನೇರಪ್ರಸಾರದ ವೀಕ್ಷಣೆ

**ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದಲ್ಲಿ** ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರಿಂದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿಯಲ್ಲಿ ಭಾರತೀಯ ರೈತರಿಗೆ 21ನೆಯ ಕಂತಿನ ವರ್ಗಾವಣೆ ಮತ್ತು ದಕ್ಷಿಣ ಭಾರತದಲ್ಲಿ ಆಯೋಜಿಸಿರುವ ನೈಸರ್ಗಿಕ ಕೃಷಿಯ ಶೃಂಗಸಭೆ 2025ರ ಉದ್ಘಾಟನೆಯ ನೇರಪ್ರಸಾರದ ವೀಕ್ಷಣೆ ಕಾರ್ಯಕ್ರಮವನ್ನು ದಿನಾಂಕ 19.11.2025 ರಂದು ಆಯೋಜಿಸಲಾಗಿತ್ತು.

ಐಸಿಎಅರ್ ಜೆಎಸ್‌ಎಸ್ ಕೆವಿಕೆಯ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರಾದ ಡಾ. ಬಿ.ಎನ್. ಜ್ಞಾನೇಶ್‌ರವರು ಮಾತನಾಡುತ್ತಾ, ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಭಾರತ ಸರ್ಕಾರದ ಒಂದು ಉಪಕ್ರಮವಾಗಿದ್ದು ಇದು ರೈತರಿಗೆ ಕನಿಷ್ಠ ಆದಾಯ ಬೆಂಬಲವಾಗಿ ವರ್ಷಕ್ಕೆ ಆರು ಸಾವಿರ ರೂಪಾಯಿಗಳವರೆಗೆ ನೀಡುತ್ತದೆ. ಈ ಯೋಜನೆಯನ್ನು ಮೊದಲು ತೆಲಂಗಾಣ ಸರ್ಕಾರವು ರೈತ ಬಂಧು ಯೋಜನೆಯಾಗಿ ಜಾರಿಗೆ ತಂದಿತು. ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದಿಂದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿಯಲ್ಲಿ ಇದನ್ನು

ರಾಷ್ಟ್ರವ್ಯಾಪಿ ಯೋಜನೆಯಾಗಿ ಫೆಬ್ರವರಿ 1, 2019 ರಂದು ಭಾರತಾದ್ಯಂತ ವಿಸ್ತರಿಸಲಾಯಿತು. ಕಿಸಾನ್ ಸಮ್ಮಾನ್ ನಿಧಿ ಪಡೆಯಬೇಕಾದರೆ ರೈತರು ಕೃಷಿ ಇಲಾಖೆಯ ವತಿಯಿಂದ ನೀಡಲಾಗುವ ರೈತರ ಗುರುತಿನ ಚೀಟಿಯನ್ನು ಪಡೆದು ಅದಕ್ಕೆ ಆಧಾರ್ ಹಾಗೂ ಬ್ಯಾಂಕ್ ಖಾತೆಯನ್ನು ಜೋಡಣೆ ಮಾಡಿಕೊಳ್ಳಬೇಕು. ರೈತರು ಕಿಸಾನ್ ಸನ್ಮಾನ್ ನಿಧಿಯ ಮೊತ್ತವನ್ನು ಅನ್ಯಕೆಲಸಗಳಿಗೆ ಉಪಯೋಗಿಸದೆ ಕೃಷಿ ಕೆಲಸ ಕಾರ್ಯಗಳಿಗೆ ಉಯೋಗಿಸಕೊಳ್ಳಬೇಕು ಎಂದು ಹೇಳಿದರು.

